ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793

KANNADA DAILY NEWS PAPER
ಕನ್ನಡ ದಿನಪತ್ರಿಕೆ

DAIRYADA DAARI
RNI NO: KNKAN/25/A2795 ಶುಕ್ರವಾರ: 01–05–2026

EMAIL : dairyadadaari@gmail.com ಸಂಪುಟ: 01 ಸಂಚಿಕೆ: 132
ಬೆಲೆ ರೂ : 2.00
ರಾಯಚೂರು
ಪುಟ: 4

# ಸಿಎಂ ಬದಲಿಸಲು ಸಮಯ ಬಂದಿಲ್ಲ : ಖರ್ಗೆ

**ಬೆಂಗಳೂರು, ಏ. 30–** ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆಗೆ ಇನ್ನೂ ಸಮಯವಿದೆ. ಆ ಸಮಯ ಬಂದಾಗ ನೋಡೋಣ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳುವ ಮೂಲಕ ರಾಜ್ಯದಲ್ಲಿ ನಾಯಕತ್ವ ಬದಲಾವಣೆ ವಿಚಾರ, ಮುಂದಿನ ಸಿಎಂ ತಾವಾಗಬೇಕು ಎಂಬೆಲ್ಲಾ ಚರ್ಚೆಗಳನ್ನು ಸಾರಸಗಟಾಗಿ ತಳ್ಳಿ ಹಾಕಿದ್ದಾರೆ.

ಕಲಬುರುಗಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಮುಖ್ಯಮಂತ್ರಿಯಾಗಿ ಸದ್ಯ ಸಿದ್ದರಾಮಯ್ಯ ಇದ್ದಾರೆ. ಹೀಗಿರುವಾಗ ನಾನು ಮುಖ್ಯಮಂತ್ರಿಯಾಗುವ ವಿಚಾರ ಇಲ್ಲಿ ಬರುವುದಿಲ್ಲ. ಸಿಎಂ ಬದಲಾವಣೆ ವಿಚಾರ ಬಂದರೆ ನಾನು, ಸೋನಿಯಾಗಾಂಧಿ, ರಾಹುಲ್‌ಗಾಂಧಿ ಎಲ್ಲ ಸೇರಿ ಚರ್ಚೆ ಮಾಡಿ ತೀರ್ಮಾನ ಮಾಡುತ್ತೇವೆ. ಸದ್ಯ ಸಿಎಂ ಬದಲಾವಣೆಗೆ ಇನ್ನು ಸಮಯವಿದೆ. ಆ ಸಮಯ ಬಂದಾಗ ನೋಡೋಣ ಎಂದಿದ್ದಾರೆ.

ಎಐಸಿಸಿ ಅಧ್ಯಕ್ಷರ ಈ ಹೇಳಿಕೆ ರಾಜಕೀಯವಾಗಿ ಮಹತ್ವ ಪಡೆದುಕೊಂಡಿದ್ದು, ಮೇ ನಲ್ಲಿ ನಾಯಕತ್ವ ಬದಲಾಗಲಿದೆ ಎಂಬ ಚರ್ಚೆಗಳಿಗೆ ತೆರೆ ಎಳೆದಂತೆ ಅವರು ಮಾತನಾಡಿದ್ದಾರೆ.

ರಾಜ್ಯದಲ್ಲಿ ಸಿದ್ದರಾಮಯ್ಯ ಬದಲಾದರೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರು ಮುಖ್ಯಮಂತ್ರಿ ಆದರೆ ಸಂತೋಷ ಎಂಬ ಗೃಹ ಸಚಿವ ಡಾ.ಜಿ. ಪರಮೇಶ್ವರ್ ಅವರ ಹೇಳಿಕೆಗೂ



ಪ್ರತಿಕ್ರಿಯಿಸಿರುವ ಖರ್ಗೆ ಅವರು, ಎಲ್ಲರೂ ಹೇಳಿದ್ದಾರೆ. ನೀವು ಹೇಳ್ತಿರೀ, ಹೈಕಮಾಂಡ್ ಹೇಳುತ್ತೆ ನಮ್ಮ ಹಣೆ ಬರಹ ಎನ್ನುವುದಕ್ಕಿಂತ ಸಿದ್ಧಾಂತ ಮುಖ್ಯ. ಪಕ್ಷದಲ್ಲಿ ಇಷ್ಟು ವರ್ಷ ದುಡಿದುಕೊಂಡು ಬಂದಿದ್ದೇನೆ ಎಂದು ಹೇಳಿ, ಸಿಎಂ ರೇಸ್‌ನಲ್ಲಿ ತಾವಿದ್ದರೂ ಅಚ್ಚರಿ ಇಲ್ಲ ಎಂಬ ಅರ್ಥದಲ್ಲಿ ಮಾತನಾಡಿದ್ದಾರೆ.

ಮುಖ್ಯಮಂತ್ರಿ ಬದಲಾವಣೆ, ಮುಖ್ಯಮಂತ್ರಿ ಯಾರಾಗಬೇಕು ಎಲ್ಲ ವಿಚಾರಗಳನ್ನು ಹೆಚ್ಚಾಗಿ ಸೋನಿಯಾಗಾಂಧಿ ಅವರೇ ನಿರ್ಧರಿಸುತ್ತಾರೆ. ಮುಖ್ಯಮಂತ್ರಿ ಬದಲಾವಣೆ ಸಮಯ ಬಂದರೆ ಎಲ್ಲರೂ ಕುಳಿತು ಚರ್ಚೆ ಮಾಡುತ್ತೇವೆ ಎಂದು ಹೇಳುವ ಮೂಲಕ ಸದ್ಯ ನಾಯಕತ್ವ ಬದಲಾವಣೆಯ ಹೇಳಿಕೆಗಳನ್ನು ಅವರು ತಳ್ಳಿ ಹಾಕಿದಂತೆ ಮಾತನಾಡಿದ್ದಾರೆ.

ರಾಜ್ಯ ಕಾಂಗ್ರೆಸ್‌ನಲ್ಲಿ ಗೊಂದಲಗಳಿದ್ದರೆ ಅದನ್ನು ಬಗೆಹರಿಸುವ ಕೆಲಸ ಮಾಡುತ್ತೇವೆ. ಯಾವಾಗ, ಏನು ಮಾಡಬೇಕು ಎಂಬುದು ಹೈಕಮಾಂಡ್‌ಗೆ ಗೊತ್ತಿದೆ. ಎಲ್ಲರೂ ಸೇರಿ ಚರ್ಚಿಸಿಯೇ ತೀರ್ಮಾನ ಮಾಡುತ್ತೇವೆ ಎಂದು ಅವರು ಹೇಳಿದ್ದಾರೆ.

ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ವಿಚಾರಗಳು ಮುನ್ನಲೆಗೆ ಬಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಹೋದರ , ಮಾಜಿ ಸಂಸದ ಡಿ.ಕೆ. ಸುರೇಶ್ ದೆಹಲಿಗೆ ತೆರಳಿ ಹೈಕಮಾಂಡ್‌ನ್ನು ಭೇಟಿ ಮಾಡಿ ಅಧಿಕಾರ ಹಂಚಿಕೆಯ ಒಪ್ಪಂದ ಯಾರಿಗೆ ಪಟ್ಟು ಹಿಡಿದ ನಂತರ ಮುಖ್ಯಮಂತ್ರಿಯಂತ್ರಿ ಆಪ್ತ ವಲಯದಲ್ಲಿ ಗುರುತಿಸಿಕೊಂಡಿರುವ ಸಚಿವರುಗಳಾದ ಸತೀಶ್ ಜಾರಕಿಹೊಳಿ, ಡಾ. ಎಚ್.ಸಿ. ಮಹದೇವಪ್ಪ ಅವರು ದೆಹಲಿಗೆ ತೆರಳಿ ವರಿಷ್ಠರನ್ನು ಭೇಟಿ ಮಾಡಿ ಸಿದ್ಧರಾಮಯ್ಯ ಪರ ಲಾಬಿ ನಡೆಸಿದ್ದರು.

ಈ ಎಲ್ಲ ಬೆಳವಣಿಗೆಗಳ ನಂತರ ಮೇ ಎರಡನೇ ವಾರದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಸಿಹಿ ಸುದ್ದಿ ಸಿಗಲಿದೆ ಎಂಬ ಚರ್ಚೆಗಳು ಕಾಂಗ್ರೆಸ್‌ನಲ್ಲಿ ನಡೆದಿದ್ದವು. ಇದರ ಮಧ್ಯೆಯೇ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರು ಮುಖ್ಯಮಂತ್ರಿ ಬದಲಾವಣೆಗೆ ಸಮಯವಿದೆ. ಆ ಸಮಯ ಬಂದಾಗ ನೋಡೋಣ ಎಂದು ಹೇಳಿರುವುದು ಮೇ ತಿಂಗಳಲ್ಲಿ ನಾಯಕತ್ವ ಬದಲಾವಣೆಗಳಾಗುತ್ತವೆ ಎಂಬ ಚರ್ಚೆಗಳಿಗೆ ತೆರೆ ಎಳೆದಂತಿದೆ. ಎಐಸಿಸಿ ಅಧ್ಯಕ್ಷರ ಈ ಹೇಳಿಕೆ ಬಗ್ಗೆ ನಾನಾ ರೀತಿಯ ವ್ಯಾಖ್ಯಾನಗಳು ಕೇಳಿ ಬಂದಿದ್ದು, 2ನೇಪುಟಕ್ಕೆ

# ಸರಕಾರಿ ಆಸ್ಪತ್ರೆಯಲ್ಲಿ ಪತ್ನಿಗೆ ಹೆರಿಗೆ ಮಾಡಿಸಿ, ಸರಳತೆ ಮೆರದ ಜಿ.ಪಂ ಸಿಇಒ

ಧೈರ್ಯದ ದಾರಿ



**ರಾಯಚೂರು:** ಸರಕಾರಿ ಆಸ್ಪತ್ರೆಯಲ್ಲಿ ಆರ್ಥಿಕವಾಗಿ ದುರ್ಬಲರು ಮಾತ್ರ ಸೇವೆ ಪಡೆಯುತ್ತಾರೆ ಎಂದು ಅಸಡ್ಡೆ ತೋರುವವರಿಗೆ ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ತಮ್ಮ ಪತ್ನಿಯ ಹೆರಿಗೆಯನ್ನು ಏಪ್ರಿಲ್ 26ರ ಭಾನುವಾರ ದಂದು ರಾಯಚೂರು ನಗರದ ರಿಮ್ಸ್ ಆಸ್ಪತ್ರೆಯಲ್ಲಿ ಮಾಡಿಸಿ, ಸರಳತೆ ಮೆರಯುವ ಮೂಲಕ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವಂತೆ ಸಂದೇಶ ರವಾನಿಸಿದ್ದಾರೆ.

ನಗರದಲ್ಲಿ ಹಲವಾರು ಖಾಸಗಿ ಅಸ್ಪತ್ರೆಗಳಿದ್ದರೂ ಸಹ ಮನಸ್ಸು ಮಾಡದೆ ಸರಕಾರದ ಆಸ್ಪತ್ರೆಗಳಲ್ಲಿ ಸುಸಜ್ಜಿತ ಹೆರಿಗೆ ಕೊಠಡಿ, ವಾರ್ಡ್, ನುರಿತ ತಜ್ಞ ವೈದ್ಯರ ಸೇವೆ, ನಿಯಮಿತವಾಗಿ ನಿಗಾ ವಹಿಸುವ ಸಿಬ್ಬಂದಿಗಳ ಸೇವೆಯನ್ನು ಪ್ರತಿಯೊಬ್ಬರೂ ಪಡೆಯಲಿ ಎಂಬ ಸದುದ್ದೇಶದಿಂದ ತಮ್ಮ ಪತ್ನಿಯ ಹೆರಿಗೆಯನ್ನು ರಿಮ್ಸ್ ಆಸ್ಪತ್ರೆಯಲ್ಲಿ ಮಾಡಿಸಿದ್ದು, ಅವರ ಪತ್ನಿ ಗಂಡು ಮಗುವಿಗೆ ಜನ್ಮ ನೀಡಿದ್ದಾರೆ. 2ನೇಪುಟಕ್ಕೆ

# ಮಿಷನ್ ಏಡ್ಸ್ ಸುರಕ್ಷಾ ಅಭಿಯಾನ ಪರಿಣಾಮಕಾರಿ ಅನುಷ್ಠಾನಗೊಳಿಸಿ: ಜಿಲ್ಲಾಧಿಕಾರಿ ನಿತೀಶ್ ಕೆ.



ಧೈರ್ಯದ ದಾರಿ

**ರಾಯಚೂರು:** ಯಾವುದೇ ಕಾಯಿಲೆಯಾಗಿರಲಿ ಅದನ್ನು ಹರಡದಂತೆ ಮುಂಜಾಗ್ರತಾ ಕ್ರಮ ವಹಿಸುವುದು ಮುಖ್ಯವಾಗಿದೆ. ಮೊಬೈಲ್‌ನಲ್ಲಿ ಎಚ್‌ಐವಿ ಸ್ಥಿತಿಗತಿಯನ್ನು ಪರಿಶೀಲನೆಗೆ ಒಳಪಡಿಸಿಕೊಳ್ಳ ಮೂಲಕ ಜಿಲ್ಲೆಯಲ್ಲಿ ಮಿಷನ್ ಏಡ್ಸ್ ಸುರಕ್ಷಾ ಅಭಿಯಾನವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇ ಕೆಂದು ಜಿಲ್ಲಾಧಿಕಾರಿ ನಿತೀಶ್ ಕೆ. ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಏಪ್ರಿಲ್ 29ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ಅರೋಗ್ಯ ಅಭಿಯಾನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.


ಸರ್ಕಾರವು ಸಮುದಾಯದ ಆರೋಗ್ಯ ಸಂರಕ್ಷಣೆಗೆ ಮತ್ತು ಸಮಾಜದ ಯುವ ಜನತೆಯ ಆರೋಗ್ಯ ಸುರಕ್ಷತೆಗೆ ಹೆಚ್ಚಿನ ಒತ್ತು ನೀಡಿ ಹೆಚ್‌ಐವಿ ಸೋಂಕನ್ನು ಆರಂಭದಲ್ಲಿಯೇ ಗುರ್ತಿಸಲು ಸರಳ ವಿಧಾನವಾದ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ವೈಯಕ್ತಿಕ ಸ್ಥಿತಿ ತಿಳಿಯಲು ಜಿಲ್ಲೆಯಾದ್ಯಂತ ವ್ಯಾಪಕ ಜಾಗೃತಿ ಮೂಡಿಸಬೇಕು ಎಂದರು.

ಈಗಾಗಲೆ ವೈದ್ಯರು, ಸಿಬ್ಬಂದಿಯರು ಅಭಿಯಾನವನ್ನು ಯಶಸ್ವಿಯಾಗಿ ಕೈಗೊಂಡಿದ್ದು ,ಸಂತಸದಾಯಕವಾಗಿದೆ. ಆದರೂ ಸಹ ಗೌಪ್ಯತೆಯೊಂದಿಗೆ ಸ್ವಯಂ ಪರೀಕ್ಷೆ ಮಾಡಿಕೊಳ್ಳಲು ಸಹಾಯಕವಾದ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ಪ್ರಶ್ನೋತ್ತರದಲ್ಲಿ ಸ್ವಯಂ ಉತ್ತರಗಳಿಂದ, ಸೋಂಕು ಹರಡಬಹುದಾದ ಸಾಧ್ಯತೆಗಳಿದ್ದಲ್ಲಿ ಕನಿಷ್ಟ ಶೇಖಡಾ 95 ರಷ್ಟು ಜನ ತಪಾಸಣೆ ಮಾಡಿಸಿಕೊಳ್ಳಲು, ಖಚಿತಪಟ್ಟ ಸೋಂಕಿತರಲ್ಲಿ ಶೇ.95 ರಷ್ಟು ಜನರನ್ನು ಎಆರ್‌ಟಿ ಕೇಂದ್ರಗಳಿಗೆ ಚಿಕಿತ್ಸೆಗೆ ಬರುವಂತೆ ಮಾಡಲು ಹಾಗೂ ಸೋಂಕಿತರಾಗಿ ಎಆರ್‌ಟಿ ಚಿಕಿತ್ಸೆ ಪಡೆಯುವರಲ್ಲಿ ಶೇ.95 ರಷ್ಟು ಜನರನ್ನು ಸದಾ ನಿಗಾವಣೆ, ಆಪ್ತ ಸಮಾಲೋಚನೆ, ಜಾಗೃತಿ ಮೂಲಕ ಚಿಕಿತ್ಸೆ ಬಿಡದಂತೆ, ವೈರಲ್ ಲೋಡ್ ಹೆಚ್ಚಾಗದಂತೆ ಹಾಗೂ ಹೈರಿಸ್ಕಲ್ಲಿ ಇರುವ ಜನತೆಗೆ ಮೂಲ ಉದ್ದೇಶ ತಲುಪಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

**ರಕ್ತದಾನ ಶಿಬಿರಗಳ ಆಯೋಜನೆಗೆ ಸೂಚನೆ:** ರಾಯಚೂರು ಮತ್ತು ಸಿಂಧನೂರುನಲ್ಲಿರುವ ಬ್ಲಡ್ ಬ್ಯಾಂಕ್‌ಗಳನ್ನು ಪ್ರತಿ ತಿಂಗಳು ಶಿಬಿರ ಏರ್ಪಡಿಸಿ, ರಕ್ತದ ಕೊರತೆಯಾಗದಂತೆ ನೋಡಿಬೇಕು. ಸಂಗ್ರಹಣೆಯ 25% ರಷ್ಟು ರಿಮ್ಸ್ ಬ್ಲಡ್

ಬ್ಯಾಂಕ್‌ಗೆ ನೀಡುವ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದರು.

100 ದಿನಗಳ ಕ್ಷಯಮುಕ್ತ ಅಭಿಯಾನಕ್ಕೆ ಸೂಕ್ತ ಯೋಜನೆ ರೂಪಿಸಿ: 100 ದಿನಗಳ ಕ್ಷಯಮುಕ್ತ ಅಭಿಯಾನದಡಿ ಕ್ಷಯರೋಗ ನಿರ್ಮೂಲನೆ ಮಾಡಲು ಮಾನದಂಡದಡಿ ಗುರುತಿಸಲ್ಪಟ್ಟ 209 ಗ್ರಾಮಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವ ಕುಟುಂಬದ ಎಲ್ಲ ಸದಸ್ಯರು ಸೇರಿದಂತೆ ಸಂಪೂರ್ಣ ಜನಸಂಖ್ಯೆಯನ್ನು ಪರೀಕ್ಷಿಸಿ ಅಗತ್ಯವಿದ್ದವರಿಗೆ ಕಫ ಪರೀಕ್ಷೆ, ಹ್ಯಾಂಡ್‌ಹೆಲ್ಡ್ ಎಕ್ಸ್‌ರೇ ಮಿಷಿನ್, ಮುಂತಾದವುಗಳಿಂದ ಪರೀಕ್ಷಿಸಿ, ಸೋಂಕು ಖಚಿತವಾದಲ್ಲಿ ಉಚಿತ ಚಿಕಿತ್ಸೆಯನ್ನು ನೀಡಿ ಗುಣಪಡಿಸಲು, ಅರ್ಹ ವ್ಯಕ್ತಿಗಳಿಗೆ ನಿಕ್ಷಯ್ ಮಿತ್ರ ಅಡಿ ದಾನಿಗಳಿಂದ ಪೌಷ್ಟಿಕ




# ಪ್ರೊ.ಬಿ.ಕೃಷ್ಣಪ್ಪ ಜಯಂತಿಯನ್ನು ಸರ್ಕಾರದ ವತಿಯಿಂದ ಆಚರಿಸಬೇಕೆಂದು–ಶ್ಯಾಮ್ ಸುಂದರ ಕುಂಬಾದಾಳ ಒತ್ತಾಯ




ಧೈರ್ಯದ ದಾರಿ

**ಮಾನ್ವಿ:ಏ. 30.:** ಪ್ರೊ.ಬಿ.ಕೃಷ್ಣಪ್ಪ ಅವಶ್ಯಕವಾಗಿದ್ದಾರೆ ಇವರ ಜಯಂತಿಯನ್ನು ಜೂ.9ರಂದು ಸರ್ಕಾರದ ವತಿಯಿಂದ ಆಚರಿಸ ಬೇಕೆಂದು ಬಹುಜನ ಸಮಾಜ ಪಕ್ಷದ ರಾಜ್ಯ ಕಾರ್ಯದರ್ಶಿ ಶ್ಯಾಮ್ ಸುಂದರ ಕುಂಬಾದಾಳ ಒತ್ತಾಯಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬಹುಜನ ಸಮಾಜ ಪಕ್ಷದಿಂದ ಹಮ್ಮಿಕೊಂಡಿದ್ದ ಪ್ರೊ.ಬಿ.ಕೃಷ್ಣಪ್ಪ ಅವರ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಕಾನ್ಸಿರಾಮರವರು 1972ರಲ್ಲಿ ಬಾಮ್ ಸೇಫ್ ಸಂಘಟನೆಯನ್ನು ದೇಶದಲ್ಲಿ ಆರಂಭಿಸಿದಾಗ ಪ್ರೊ.ಬಿ.ಕೃಷ್ಣಪ್ಪನವರು ಕರ್ನಾಟಕ ರಾಜ್ಯದಲ್ಲಿ ಇದೇ ರೀತಿಯ ದಲಿತರ ಚಳುವಳಿಯನ್ನು ಸ್ಥಾಪಿಸಿದರು, ದೇಶದಲ್ಲಿ ಬಾಮ್ ಸೇಫ್ ಸಂಘಟನೆ ಬಹುಜನ ಸಮಾಜ ಪಕ್ಷವನ್ನಾಗಿ ಸ್ಥಾಪಿಸಿದಾಗ ಕರ್ನಾಟಕ ರಾಜ್ಯದಲ್ಲಿ ಕಾನ್ಸಿರಾಮರಿಂದ ಪ್ರೇರಿತಗೊಂಡ ಪ್ರೊ.ಬಿ. ಕೃಷ್ಣಪ್ಪನವರು ತಾವು ಹಾಕಿದ ದಸಂಸ ಸಂಘಟನೆಯನ್ನು ಬಹುಜನ ಸಮಾಜ ಪಕ್ಷಕ್ಕೆ ಪ್ರಥಮವಾಗಿ ಬೆಂಬಲ ಕೊಡುವುದಲ್ಲದೆ ಬಹುಜನ ಚಳವಳಿಯ ರಾಜಕೀಯ ದಲಿತರ ಪ್ರವೇಶವನ್ನುಂಟು ಮಾಡಿದ್ದಾರೆ. ರಾಜ್ಯಕ್ಕೆ ದಲಿತರ ರಾಜಕೀಯ ಪ್ರವೇಶವನ್ನು ಮುಂದಾಳಾಗಿ ಒಪ್ಪಿಕೊಂಡು ರಾಜಕೀಯ ನೆಲೆಯನ್ನು ಕಂಡುಕೊಟ್ಟ ರಾಜ್ಯದ ಈ ಮಹಾನ್ ನಾಯಕರಿಂದ ಇಂದು ನಮ್ಮೆಲ್ಲರಿಗೆ ರಾಜಕೀಯ ಸ್ಥಾನಮಾನಗಳು ಸಿಗುತ್ತಿವೆ, ಮಹಾನ್ ದಲಿತ ನಾಯಕರಾದ ಪ್ರೊ.ಬಿ.ಕೃಷ್ಣಪ್ಪ ರವರ ಪರವಾಗಿರುವ ಸಾಹಿತಿಗಳು, ಚಿಂತಕರು, ದಲಿತ ನಾಯಕರು ಇನ್ನುವರೆಗೂ ರಾಜ್ಯದಲ್ಲಿ ಚಳುವಳಿಯನ್ನು ಮುನ್ನಡೆಸುತ್ತಿದ್ದಾರೆ ಎಂದ ಅವರು ಇವರ ಪ್ರತಿಮೆಯನ್ನು ಸರ್ಕಾರದ ಕೇಂದ್ರ ಬಿಂದುವಾಗಿರುವ ವಿಧಾನಸೌಧ ಮುಂಭಾಗದಲ್ಲಿ ಸ್ಥಾಪಿಸಿ ದಲಿತರ ರಾಜಕೀಯ ಭವಿಷ್ಯವನ್ನು ಆದ್ಯತೆ ಸರ್ಕಾರಗಳು ಕೊಡಬೇಕಾಗಿತ್ತು, ದಲಿತರಿಗೆ ಇವರ ನಾಯಕತ್ವದ ಅವಶ್ಯಕತೆ ಬೇಕಾಗಿತ್ತು, ರಾಜ್ಯದಲ್ಲಿರುವ ಎಲ್ಲಾ ದಲಿತರ ಅಭಿವೃದ್ಧಿಗಾಗಿ ರಾಜಕೀಯ ಅಭಿವೃದ್ಧಿಗಾಗಿ ಪ್ರೊ.ಬಿ.ಕೃಷ್ಣಪ್ಪ ಅವಶ್ಯಕವಾಗಿದ್ದಾರೆ ಇವರ ಜಯಂತಿಯನ್ನು ಜೂ.9ರಂದು ಸರ್ಕಾರದ ವತಿಯಿಂದ ಆಚರಿಸಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಚಂದ್ರಶೇಖರ ಮಾನ್ವಿ ವಿಧಾನಸಭಾ ಕ್ಷೇತ್ರದ ಉಸ್ತುವಾರಿಗಳು, ಶಿವಲಿಂಗಯ್ಯ ಸ್ವಾಮಿ ಸಂಯೋಜಕ ಬಿ ಎಸ್ ಪಿ , ಚಂದ್ರಶೇಖರಯ್ಯ ಸ್ವಾಮಿ ನಗರ ಘಟಕ ಅಧ್ಯಕ್ಷರು, ರವೀಂದ್ರ ಜಾನಕಲ್ ದಸಂಸ ಮುಖಂಡರು, ಮಲ್ಲಿಕಾರ್ಜುನ ಜಾನಕಲ ಮಾಜಿ ಪುರಸಭೆ ಸದಸ್ಯರು, ಶರಣಯ್ಯ ಸ್ವಾಮಿ, ಖಾಸಿಂ, ಬಾಬಾ, ಚನ್ನಬಸವ ಹಡಪದ, ತಾಯಪ್ಪ ದೊಡ್ಡಿ, ಮಹಮ್ಮದ್, ಇತರರು ಉಪಸ್ಥಿತರಿದ್ದರು.



**ಮೊದಲನೇ ಪುಟದಿಂದ**

## ಮಿಷನ್ ಏಡ್ಸ್ ಸುರಕ್ಷಾ ಅಭಿಯಾನ ಪರಿಣಾಮಕಾರಿ ಅನುಷ್ಠಾನಗೊಳಿಸಿ: ಜಿಲ್ಲಾಧಿಕಾರಿ ನಿತೀಶ್ ಕೆ.

ಆಹಾರ ಒದಗಿಸಲು ಜಿಲ್ಲಾಧಿಕಾರಿಗಳು ಸೂಚಿಸಿದರು.

2030ರ ಒಳಗೆ ಕ್ಷಯರೋಗ ಮುಕ್ತ ಭಾರತದ ಗುರಿ ತಲುಪಲು ಕಂದಾಯ ಇಲಾಖೆ, ಗ್ರಾಮ ಪಂಚಾಯತ, ಸ್ಥಳೀಯ ಸಂಸ್ಥೆಗಳ, ವಿವಿಧ ಇಲಾಖೆಗಳ ಸಹಕಾರ ಪಡೆದು ಯಶಸ್ವಿಗೊಳಿಸಲು ಸೂಚಿಸಿದರು.

**ಗುಣಮಟ್ಟದದಿಂದ ಹೆರಿಗೆ ನಿರ್ವಹಣೆ:** ಜಿಲ್ಲೆಯ ಎಲ್ಲ ಆಸ್ಪತ್ರೆಗಳಲ್ಲಿನ ಸಂಪನ್ಮೂಲಗಳ ಬಳಕೆಯಿಂದ ಗುಣಮಟ್ಟದ ಸೇವೆ ನೀಡುತ್ತಿರುವುದು ಆಶಾದಾಯಕವಾಗಿದ್ದು, ಯಾವುದೇ ಪರಿಕರ, ಉಪಕರಣಗಳ ಅಗತ್ಯತೆವಿದ್ದರೆ ನಿಯಮಾನುಸಾರ ಬೇಡಿಕೆ ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ವಿಜಯ ಶಂಕರ, ಡಿಪಿಡಿಓ ಡಾ.ಚಂದ್ರಶೇಖರಯ್ಯ ಸ್ವಾಮಿ, ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್., ಡಿಎಸ್‌ಓ ಡಾ.ಗಣೇಶ್ ಕೆ, ಡಿಟಿಓ ಡಾ.ಮಹಮ್ಮದ್ ಶಾಕೀರ್ ಮೊಹಿಯುದ್ದೀನ್, ಪರಿಸರ ಇಲಾಖೆ ಅಧಿಕಾರಿ, ಸಹಾಯಕ ಔಷಧ ನಿಯಂತ್ರಕರು ಸೇರಿದಂತೆ ಜಿಲ್ಲೆಯ ಎಲ್ಲ ತಾಲೂಕಾ ಆರೋಗ್ಯಾಧಿಕಾರಿಗಳು, ಸಾರ್ವಜನಿಕ ಆಸ್ಪತ್ರೆ, ತಾಯಿ ಮಕ್ಕಳ ಆಸ್ಪತ್ರೆಯ ಮುಖ್ಯ ಆಡಳಿತ ವೈದ್ಯಾಧಿಕಾರಿಗಳು, ಡಿಹೆಚ್‌ಇಓ, ಡಿಪಿಎಮ್, ಡಿಡಿಎಮ್, ಎನ್‌ಕ್ಯೂಎಎಸ್, ಆರ್‌ಕೆಎಸ್‌ಕೆ ಸಲಹೆಗಾರರು ಹಾಗೂ ಹೆಚ್‌ಐವಿ ಏಡ್ಸ್ ನಿರ್ಮೂಲನೆಗೆ ಕೆಲಸ ಮಾಡುತ್ತಿರುವ ಸಂಘಟನೆಗಳ ಪದಾಧಿಕಾರಿಗಳು, ಡ್ಯಾಪ್ಕೋ ಸಿಬ್ಬಂದಿಗಳು ಇದ್ದರು.

## ಸಿಎಂ ಬದಲಿಸಲು ಸಮಯ ಬಂದಿಲ್ಲ : ಖರ್ಗೆ

ಮುಂದೆ ಕಾಂಗ್ರೆಸ್‌ನಲ್ಲಿ ಯಾವ ರೀತಿಯ ಬೆಳವಣಿಗೆಗಳಾಗುತ್ತವೆ ಎಂಬುದನ್ನು ಕಾದು ನೋಡಬೇಕಿದೆ.
ಖರ್ಗೆ ಸಿಎಂ ಆದ್ರೆ ತಪ್ಪೇನು: ಎಐಸಿಸಿ ಅಧ್ಯಕ್ಷರಾಗಿರುವ ಮಲ್ಲಿಕಾರ್ಜುನಖರ್ಗೆ ಅವರು ಮುಖ್ಯಮಂತ್ರಿಯಾದರೆ ಸಂತೋಷ ಎಂಬ ತಮ್ಮ ಹೇಳಿಕೆಯನ್ನು ಸಮರ್ಥಿಸಿಕೊಂಡಿರುವ ಗೃಹ ಸಚಿವ ಡಾ.ಜಿ. ಪರಮೇಶ್ವರ್, ಮಲ್ಲಿಕಾರ್ಜುನಖರ್ಗೆ ಅವರ ಸಮಕಾಲಿನರು ಮುಖ್ಯಮಂತ್ರಿ ಆಗಿರುವಾಗ ಖರ್ಗೆ ಮುಖ್ಯಮಂತ್ರಿಯಾದರೆ ತಪ್ಪೇನು ಎಂದು ಪ್ರಶ್ನಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಲ್ಲಿಕಾಜುನಖರ್ಗೆ ಅವರ ಸಮಕಾಲೀನರಾದ ಆರ್.ಗುಂಡೂರಾವ್, ವೀರಪ್ಪ ಮೊಯ್ಲಿ ಇವರೆಲ್ಲಾ ಮುಖ್ಯಮಂತ್ರಿ ಆದರು ಖರ್ಗೆ ಅವರು ಆಗಲಿ ಎಂಬುದು ತಮ್ಮ ಆಶಯ ಹಾಗಾಗಿ ನಾನು ಖರ್ಗೆ ಮುಖ್ಯಮಂತ್ರಿ ಆದರೆ ಸಂತೋಷ ಎಂದು ಹೇಳಿದ್ದೆ ಎಂದು ತಮ್ಮ ಮಾತುಗಳನ್ನು ಸಮರ್ಥಿಸಿಕೊಂಡರು.

ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರದ್ದು 50 ವರ್ಷದ ಸಾಧನೆ ಅವರಿಗೆ ಹೈಕಮಾಂಡ್ ಮುಖ್ಯಮಂತ್ರು ಹುದೆ ನೀಡಿದರೆ ತಪ್ಪೇನು ಎಂದು ನಾನು ಹೇಳಿದ್ದೆ ಏನೆ ಇರಲಿ ಹೈಕಮಾಂಡ್ ತೀರ್ಮಾನವೇ ಅಂತಿಮ ಎಂದರು.

## ಸರಕಾರಿ ಆಸ್ಪತ್ರೆಯಲ್ಲಿ ಪತ್ನಿಗೆ ಹೆರಿಗೆ ಮಾಡಿಸಿ, ಸರಳತೆ ಮೆರೆದ ಜಿ.ಪಂ ಸಿಇಓ

ಪ್ರಸ್ತುತ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಆಧೀನದ ನಗರದ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಆರೈಕೆಯಲ್ಲಿದ್ದು, ತಾಯಿ ಮಗು ಅರೋಗ್ಯವಾಗಿದ್ದಾರೆ.

ಸರಕಾರದ ಸೌಲಭ್ಯ ಪ್ರತಿಯೊಬ್ಬರು ಪಡೆಯಿರಿ: ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ ಕಾಂದೂ ಅವರು ಮಾತನಾಡಿ, ಸರಕಾರವು ಗ್ರಾಮೀಣ ಪ್ರದೇಶ ಸೇರಿದಂತೆ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ತಾಯಿ ಮಗುವಿನ ಆರೈಕೆಗಾಗಿ ನುರಿತ ಹೆರಿಗೆ ತಜ್ಞರು, ಸುಸಜ್ಜಿತ ಹೆರಿಗೆ ಕೊಠಡಿ, ಆಧುನಿಕ ಪರಿಕರಗಳು, ಸೂಕ್ತ ಪ್ರಯೋಗಾಲಯ ಪರೀಕ್ಷೆಗಳು, ಸಕಾಲದಲ್ಲಿ ಔಷಧೋಪಚಾರ, ಪೌಷ್ಟಿಕ ಆಹಾರ ಒದಗಿಸುವುದನ್ನು ಖುದ್ದು ಪರಿಶೀಲನೆಯಲ್ಲಿ ಕಂಡು ಬರುತ್ತಿರುವುದರಿಂದ ಸರಕಾರದ ಸೌಲಭ್ಯಗಳು ಜನ ಸಾಮಾನ್ಯರು ಪಡೆಯಬೇಕು. ತಾಯಿ ಮಕ್ಕಳ ಆಸ್ಪತ್ರೆ ಅಥವಾ ರಿಮ್ಸ್ ಆಸ್ಪತ್ರೆಯಲ್ಲಿ ಹೆರಿಗೆ ಮಾಡಿಸುವ ನಿರ್ಧಾರ ಕೈಗೊಂಡಿದ್ದು, ರಿಮ್ಸ್ನಲ್ಲಿ ಹೆರಿಗೆಯಾಗಿದು, ಪ್ರಸ್ತುತ ಮುಂದಿನ ಆರೈಕೆಗೆ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಆರೈಕೆ ಪಡೆಯುತ್ತಿದ್ದಾರೆ. ಇದು ವೈಯಕ್ತಿಕವಾಗಿ ನಮಗೆ ಹೆಮ್ಮೆಯ ವಿಷಯವಾಗಿದೆ ಎಂದರು.

## ವಿವಿಧ ದಿನಾಂಕಗಳಂದು ಜೆಸ್ಕಾಂ ಗ್ರಾಹಕರ ಕುಂದು ಕೊರತೆ ಸಭೆ

**ರಾಯಚೂರು :** ರಾಯಚೂರು ಜಿಲ್ಲೆಯ ಎಲ್ಲಾ ತಾಲ್ಲೂಕಿನ ಜೆಸ್ಕಾಂ ಉಪ ವಿಭಾಗಳಲ್ಲಿ ಗ್ರಾಹಕರ ಕುಂದು ಕೊರೆತೆ ತ್ರೈಮಾಸಿಕ ಸಭೆಯನ್ನು ಜೆಸ್ಕಾಂ ಅಧೀಕ್ಷಕ ಅಭಿಯಂತರರ ಅಧ್ಯಕ್ಷತೆಯಲ್ಲಿ ವಿವಿಧ ದಿನಾಂಕಗಳಂದು ಹಮ್ಮಿಕೊಳ್ಳಲಾಗಿದ್ದು, ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಹಕರು ಹಾಜರಾಗಿ ತಮ್ಮ ಕುಂದು ಕೊರತೆಗಳನ್ನು ನಿವಾರಿಸಿಕೊಳ್ಳಬಹುದಾಗಿದೆ ಎಂದು ಕೋರಲಾಗಿದೆ.

ಮೇ.06ರ ಬೆಳಿಗ್ಗೆ 9ಗಂಟೆಗೆ ಮಸ್ಕಿ, ಮೇ.11ರ ಬೆಳಿಗ್ಗೆ 9ಕ್ಕೆ ದೇವದುರ್ಗ, ಮೇ.14ರ ಬೆಳಿಗ್ಗೆ 9ಕ್ಕೆ ಲಿಂಗಸುಗೂರು ಹಾಗೂ ಮೇ.16ರ ಬೆಳಿಗ್ಗೆ 9ಕ್ಕೆ ಸಿರವಾರದಲ್ಲಿ ಗ್ರಾಹಕರ ಕುಂದು ಕೊರೆತೆ ತ್ರೈಮಾಸಿಕ ಸಭೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗದ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ: ಅಪೇಕ್ಷಣೆಗೆ ಅರ್ಜಿ ಆಹ್ವಾನ

**ರಾಯಚೂರು:** ರಾಯಚೂರು ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಗೆ ಬರುವ ರಾಮಾಂಜಿನೇಯ್ಯ ಕಾಲೋನಿ-01ನೇ ಅಂಗನವಾಡಿ ಕೇಂದ್ರದ ಅಂಗನವಾಡಿ ಸಹಾಯಕಿ ಹುದ್ದೆಯ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಲಾಗಿದ್ದು, ಆಯ್ಕೆ ಪಟ್ಟಿಗೆ ಅಕ್ಷೇಪಣೆ ಸಲ್ಲಿಸಲು ಮೇ.06ಕೊನೆಯ ದಿನಾಂಕವಾಗಿದೆ.

ಅಂಗನವಾಡಿ ಸಹಾಯಕಿ ಹುದ್ದೆಗೆ ಶ್ರೀಮತಿ ಪದ್ಮಾವತಿ ಗಂಡ ಡಿ.ಹೆಚ್.ಆನಂದ ಪರಿಶಿಷ್ಟ ಜಾತಿ ಅವರನ್ನು ತಾತ್ಕಾಲಿಕವಾಗಿ ಆಯ್ಕೆ ಮಾಡಲಾಗಿದ್ದು, ತಾತ್ಕಾಲಿಕ ಆಯ್ಕೆ ಪಟ್ಟಿಗೆ ಅಕ್ಷೇಪಣೆ ಅರ್ಜಿ ಸಲ್ಲಿಸುವವರು ಸೂಕ್ತ ದಾಖಲಾತಿಗಳೊಂದಿಗೆ ದಿನಾಂಕ 06-05-2026ರ ಬೆಳಿಗ್ಗೆ 8ಗಂಟೆಯಿಂದ ಮಧ್ಯಾಹ್ನ 01:30ರವರೆಗೆ ರಾಯಚೂರಿನ ಶಿಶು ಅಭಿವೃದ್ಧಿ ಕಾರ್ಯಾಲಯಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ರಾಯಚೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ.02ರಂದು ಗ್ರಾಮೀಣ ಭಾಗದಲ್ಲಿ ವಿದ್ಯುತ್ ವ್ಯತ್ಯಯ

**ರಾಯಚೂರು:** ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ಯರಗೇರಾ ವಿದ್ಯುತ್ ಉಪ-ಕೇಂದ್ರದ ಮಿಡಗಲದಿನ್ನಿ, ವೈ.ಮಲ್ಲಾಪುರ, ಎಲ್.ಕೆ.ದೊಡ್ಡಿ, ಜಂಬಲದಿನ್ನಿ ಫೀಡರ್‌ಗಳಲ್ಲಿ ತುರ್ತು ನಿರ್ವಹಣ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಮೇ.02ರ ಬೆಳಗ್ಗೆ 10ಗಂಟೆಯಿಂದ ಸಾಯಂಕಾಲ 05ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀರಿನ ತೀವ್ರ ಸಂಕಷ್ಟಕ್ಕೆ ಎಚ್ಚರಿಕೆ: ಪರಿಹಾರ ಇಲ್ಲದಿದ್ದರೆ ಬೀದಿಗಿಳಿದು ಹೋರಾಟ : ಮಹೇಶರಡ್ಡಿ ಮುದ್ನಾಳ



**ಯಾದಗಿರಿ:ಏ.30:** ಯಾದಗಿರಿ ವಿಧಾನಸಭಾ ಮತಕ್ಷೇತ್ರದಲ್ಲಿ ಕುಡಿಯುವ ನೀರಿನ ಭೀಕರ ಸಮಸ್ಯೆ ಉಲ್ಬಣಗೊಂಡಿರುವ ಹಿನ್ನೆಲೆಯಲ್ಲಿ, ತಕ್ಷಣ ಕ್ರಮ ಕೈಗೊಳ್ಳದಿದ್ದರೆ ಬೀದಿಗಿಳಿದು ಹೋರಾಟ ನಡೆಸುವುದಾಗಿ ಬಿಜೆಪಿ ರಾಜ್ಯ ಕಾರ್ಯಕಾರಿ ಸದಸ್ಯ ಮಹೇಶರಡ್ಡಿ ಮುದ್ನಾಳ ಎಚ್ಚರಿಕೆ ನೀಡಿದ್ದಾರೆ.

ಈ ಕುರಿತು ಹೇಳಿಕೆ ನೀಡಿದ ಅವರು, ಬೇಸಿಗೆ ಆರಂಭವಾಗಿ ಮೂರು ತಿಂಗಳು ಕಳೆದರೂ ಜನರು ಮತ್ತು ಜಾನುವಾರುಗಳಿಗೆ ಶುದ್ಧ ಕುಡಿಯುವ ನೀರು ಒದಗಿಸಲು ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ವಿಫಲರಾಗಿದ್ದಾರೆ ಎಂದು ಆರೋಪಿಸಿದರು. ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಕೊರತೆ ತೀವ್ರವಾಗಿದ್ದು, ನದಿಗಳು, ಹಳ್ಳ-ಕೊಳ್ಳಗಳು ಬತ್ತಿ ಹೋಗಿವೆ. ಅನೇಕ ಬೋರ್‌ವೆಲ್‌ಗಳು ಕಾರ್ಯನಿರ್ವಹಿಸುತ್ತಿಲ್ಲ. ಶುದ್ಧ ಕುಡಿಯುವ ನೀರಿನ ಘಟಕಗಳು ವರ್ಷಗಳಿಂದ ದುರಸ್ತಿಗೆ ಬಾರದಿರುವುದು ಪರಿಸ್ಥಿತಿಯನ್ನು ಮತ್ತಷ್ಟು ಗಂಭೀರಗೊಳಿಸಿದೆ ಎಂದು ಹೇಳಿದರು.

ಯಾದಗಿರಿ ನಗರ ಸೇರಿದಂತೆ ಹಲವಾರು ಹಳ್ಳಿಗಳಲ್ಲಿ ಜನರು ದಿನವೂ ನೀರಿಗಾಗಿ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಕಲುಷಿತ ನೀರನ್ನು ಕುಡಿಯಬೇಕಾದ ಅನಿವಾರ್ಯತೆ ಎದುರಾಗಿ, ಆರೋಗ್ಯ ಸಮಸ್ಯೆಗಳು ಹೆಚ್ಚಾಗುವ ಆತಂಕವೂ ಇದೆ. ಈ ನಡುವೆ ತಹಸೀಲ್ದಾರರು, ತಾಪಂ ಇಒಗಳು ಹಾಗೂ ಗ್ರಾಪಂ ಪಿಡಿಒಗಳು ಸಮರ್ಪಕವಾಗಿ ಸ್ಪಂದಿಸುತ್ತಿಲ್ಲ ಎಂಬ ದೂರುಗಳು ಕೇಳಿಬರುತ್ತಿವೆ ಎಂದು ಅವರು ತಿಳಿಸಿದರು.

ಯಾದಗಿರಿ ವಿಧಾನಸಭಾ ಕ್ಷೇತ್ರವು ಮೂರು ತಾಲೂಕುಗಳಲ್ಲಿ ವ್ಯಾಪಿಸಿದ್ದು, ಅನೇಕ ಗ್ರಾಮ ಪಂಚಾಯಿತಿಗಳಲ್ಲಿ ನೀರಿನ ಸಮಸ್ಯೆ ತೀವ್ರವಾಗಿದೆ. ನಗರದಲ್ಲಿಯೂ ಬಹುತೇಕ ವಾರ್ಡ್‌ಗಳಲ್ಲಿ ನೀರಿನ ಅಭಾವ ಕಂಡುಬರುತ್ತಿದೆ. ಜನರು ದೂರದೂರಿಗೆ ತೆರಳಿ ನೀರು ತರುವ ದೃಶ್ಯ ಸಾಮಾನ್ಯವಾಗಿದೆ. ಆದರೂ ಸಂಬಂಧಪಟ್ಟ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂದು ಆರೋಪಿಸಿದರು.

ಇನ್ನೂ ಸುಮಾರು 40 ದಿನಗಳ ಕಾಲ ಬೇಸಿಗೆ ಮುಂದುವರಿಯುವ ಸಾಧ್ಯತೆ ಇರುವುದರಿಂದ, ತಾಪಮಾನವು 42ರಿಂದ 45 ಡಿಗ್ರಿ ಸೆಲ್ಸಿಯಸ್‌ವರೆಗೆ ಏರಿಕೆಯಾಗುತ್ತಿದೆ. ಇಂತಹ ಪರಿಸ್ಥಿತಿಯ ಗಂಭೀರತೆಯನ್ನು ಮನಗಂಡು ತಕ್ಷಣವೇ ಶುದ್ಧ ಕುಡಿಯುವ ನೀರಿನ ಸರಬರಾಜು, ಜಾನುವಾರುಗಳಿಗೆ ನೀರು ಹಾಗೂ ಮೇವು ವ್ಯವಸ್ಥೆ ಕಲ್ಪಿಸಬೇಕು ಎಂದು ಮಹೇಶರಡ್ಡಿ ಮುದ್ನಾಳ ಆಗ್ರಹಿಸಿದರು.

## ಕೆ.ಪಿ.ಎಸ್.ಸಿ ಗೆಜೆಟೆಡ್ ಪ್ರೊಬೇಷನರಿ ವ್ಯಕ್ತಿತ್ವ ಪರೀಕ್ಷೆಗೆ ಅರ್ಹತೆ ಪಡೆದ ಅಭ್ಯರ್ಥಿಗಳಿಗಾಗಿ ಅಣುಕು ವ್ಯಕ್ತಿತ್ವ ಪರೀಕ್ಷೆ ಆಯೋಜನೆ

ಧೈರ್ಯದ ದಾರಿ



**ರಾಯಚೂರು:** ಕರ್ನಾಟಕ ಲೋಕಸೇವಾ ಆಯೋಗ (ಕೆ.ಪಿ.ಎಸ್.ಸಿ) ವತಿಯಿಂದ 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಗ್ರೂಪ್-ಎ ಹಾಗೂ ಬಿ ವೃಂದದ ಒಟ್ಟು 384 ಹುದ್ದೆಗಳ (310-ಆರ್‌ಪಿಸಿ+ 74-ಹೆಚ್‌ಕೆ) ನೇಮಕಾತಿ ಪ್ರಕ್ರಿಯೆ ನಡೆಯುತ್ತಿದ್ದು, ಮುಖ್ಯ ಪರೀಕ್ಷೆಯಲ್ಲಿ ತೇರ್ಗಡೆಗೊಂಡು 1:3ರ ಅನುಪಾತದಲ್ಲಿ ವ್ಯಕ್ತಿತ್ವ ಪರೀಕ್ಷೆಗೆ ಅರ್ಹತೆ ಪಡೆದ ಅಭ್ಯರ್ಥಿಗಳಿಗಾಗಿ ಸಂದರ್ಶನ ಪೂರ್ವ ಸಿದ್ಧತೆ ಹಾಗೂ ಆತ್ಮವಿಶ್ವಾಸ ವೃದ್ಧಿ ಉದ್ದೇಶದಿಂದ ರಾಯಚೂರು ಜಿಲ್ಲಾಡಳಿತ ವತಿಯಿಂದ ಅಣುಕು ವ್ಯಕ್ತಿತ್ವ ಪರೀಕ್ಷೆ (Mock Personality Test) ಆಯೋಜಿಸಲಾಗುತ್ತಿದೆ.

ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಲು ವಿಷಯ ಜ್ಞಾನದ ಜೊತೆಗೆ ವ್ಯಕ್ತಿತ್ವ, ಸಂವಹನ ಕೌಶಲ್ಯ, ನಿರ್ಧಾರ ಕೈಗೊಳ್ಳುವ ಸಾಮರ್ಥ್ಯ, ಆಡಳಿತಾತ್ಮಕ ಮನೋಭಾವ ಹಾಗೂ ಸಮಕಾಲೀನ ವಿಷಯಗಳ ಅರಿವು ಅತ್ಯಂತ ಅವಶ್ಯಕವಾಗಿದೆ. ಈ ಹಿನ್ನೆಲೆಯಲ್ಲಿ ಅಭ್ಯರ್ಥಿಗಳಿಗೆ ನೈಜ ಸಂದರ್ಶನದ ಅನುಭವ ಕಲ್ಪಿಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ರೂಪಿಸಲಾಗಿದೆ.

ಅಣುಕು ವ್ಯಕ್ತಿತ್ವ ಪರೀಕ್ಷೆಯಲ್ಲಿ ಅನುಭವಿ ಜಿಲ್ಲಾಮಟ್ಟದ ಅಧಿಕಾರಿಗಳು, ವಿಷಯ ತಜ್ಞರು, ಹಿರಿಯ ಸ್ಪರ್ಧಾತ್ಮಕ ಪರೀಕ್ಷಾ ಮಾರ್ಗದರ್ಶಕರು ಹಾಗೂ ಸಂದರ್ಶನ ಪ್ಯಾನೆಲ್ ಸದಸ್ಯರು ಭಾಗವಹಿಸಿ, ಅಭ್ಯರ್ಥಿಗಳ ಸಂದರ್ಶನ ನಡೆಸುವ ಮೂಲಕ ವೈಯಕ್ತಿಕ ಪ್ರತಿಕ್ರಿಯೆ, ಸಂದರ್ಶನ ತಂತ್ರಗಳು, ಸಾಮಾನ್ಯ ತಪ್ಪುಗಳು ಹಾಗೂ ವ್ಯಕ್ತಿತ್ವ ಅಭಿವೃದ್ಧಿಗೆ ಸಂಬಂಧಿಸಿದ ಉಪಯುಕ್ತ ಸಲಹೆಗಳನ್ನು ನೀಡಲಿದ್ದಾರೆ.

ಭಾಗವಹಿಸಲು ಇಚ್ಛಿಸುವ ಅರ್ಹ ಅಭ್ಯರ್ಥಿಗಳು ತಮ್ಮ ಹೆಸರು, ಪರೀಕ್ಷಾ ನೋಂದಣಿ ಸಂಖ್ಯೆ, ಸಂಪರ್ಕ ಸಂಖ್ಯೆ ಹಾಗೂ ಮುಖ್ಯ ಪರೀಕ್ಷೆಯ ವಿವರಗಳನ್ನು ಜಿಲ್ಲಾಡಳಿತದ ಸೂಚನೆಯಂತೆ ಮುಂಚಿತವಾಗಿ ನೋಂದಾಯಿಸಿಕೊಳ್ಳುವುದು ಕಡ್ಡಾಯವಾಗಿದೆ.

ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಕಾರ್ಯಕ್ರಮ ಆಯೋಜನಾ ಅಧಿಕಾರಿಗಳಾದ ಮಹಮ್ಮದ್ ಯೂಸೂಫ್, ಯೋಜನಾ ನಿರ್ದೇಶಕಸರು ಸಿಯೋಲ್ ಇವರ ಮೊಬೈಲ್ ಸಂಖ್ಯೆ: 9964012161ಗೆ ಸಂಪರ್ಕ ಮಾಡಬಹುದಾಗಿದೆ. ಕಾರ್ಯಕ್ರಮದ ದಿನಾಂಕ ಹಾಗೂ ಸ್ಥಳವನ್ನು ಶೀಘ್ರದಲ್ಲೇ ಪ್ರತ್ಯೇಕವಾಗಿ ಪ್ರಕಟಿಸಲಾಗುವುದು.

ಜಿಲ್ಲೆಯ ಸ್ಪರ್ಧಾತ್ಮಕ ಪರೀಕ್ಷಾ ಅಭ್ಯರ್ಥಿಗಳು ಈ ಅಪರೂಪದ ಅವಕಾಶವನ್ನು ಸದುಪಯೋಗಪಡಿಸಿಕೊಂಡು ವ್ಯಕ್ತಿತ್ವ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡುವಂತೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೆಡಿಎಸ್ ನ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಇಂದು ಸೇಡಂಗೆ: ಜನತದಳ ಬೆಳ್ಳಿ ಹಬ್ಬ ಸಮಾವೇಶದಲ್ಲಿ ಬಾಗಿ



**ಸೇಡಂ , ಏ ,30:** ಕರ್ನಾಟಕ ಪ್ರದೇಶ ಯುವಜನತಾ ದಳ (ಜಾತ್ಯತೀತ ) ವಿಭಾಗದ ಅಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ಅವರು (ದಿನಾಂಕ.30-4-2026 ರಂದು) ಇಂದು ಸೇಡಂ ಪಟ್ಟಣಕ್ಕೆ ಆಗಮಿಸಲಾಗುತ್ತಿದ್ದು, ತಾಲೂಕಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿ ಜನತದಳ ಹಾಗೂ ಬೆಳ್ಳಿ ಹಬ್ಬ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷರಾದ ಬಾಲರಾಜ್ ಅಶೋಕ್ ಗುತ್ತೇದಾರ್ ಅವರು ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುವ ಅವರು ಸಂಜೆ 4-30 ಪಟ್ಟಣದ ಜೆಡಿಎಸ್ ಪಕ್ಷದ ಕಛೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಪಾಲ್ಗೊಂಡು, ಸಂಜೆ 5 ಗಂಟೆಗೆ ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ಹಮ್ಮಿಕೊಂಡ ಜನರೊಂದಿಗೆ ಜನತದಳ ಹಾಗೂ ಬೆಳ್ಳಿ ಹಬ್ಬ ಸಮಾವೇಶ ಉದ್ಘಾಟಿಸಿ ಮಾತನಾಡಲಿದ್ದಾರೆ. ಈ ಸಮಾವೇಶದಲ್ಲಿ ಮಾಜಿ ಸಚಿವರು, ಶಾಸಕರು, ಸೇರಿದಂತೆ ಪಕ್ಷದ ಹಿರಿಯ ನಾಯಕರು, ಸುಮಾರು ಕಾರ್ಯಕರ್ತರು ಆಗಮಿಸಿದ್ದಾರೆ ಎಂದು ತಿಳಿಸಿದ್ದಾರೆ.

## ಅಂತರರಾಜ್ಯ ಕುಖ್ಯಾತ ಮನೆಗಳ್ಳನ ಬಂಧನ 14 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಜಪ್ತಿ

**ಕಲಬುರಗಿ,ಏ.30:** ಇಲ್ಲಿನ ದೇವಾನಗರದಲ್ಲಿ ನಡೆದ ಮನೆ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಅಂತರರಾಜ್ಯ ಕಳ್ಳನೊಬ್ಬನನ್ನು ಬಂಧಿಸಿ 14 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಜಪ್ತಿ ಮಾಡಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ತಿಳಿಸಿದರು.

ನಗರದ ಪೊಲೀಸ್ ಆಯುಕ್ತರ ಕಚೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತೆಲಂಗಾಣ ರಾಜ್ಯದ ಮೆಡಿಚಲ್ ಮಲ್ಕಾಜಗಿರಿಯ ಕೀಸರ ಮಂಡಲ ನಾಗವರಂನ ಶಿವಪ್ರಸಾದ ಆದಿನಾರಾಯಣ ಮಂತ್ರಿ ಅಲಿಯಾಸ್ ಮಂತ್ರಿ ಶಂಕರ (61) ಎಂಬಾತನನ್ನು ಬಂಧಿಸಿ 14 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಜಪ್ತಿ ಮಾಡಿ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ತಿಳಿಸಿದರು.

ನಗರದ ದೇವಾನಗರ ನಿವಾಸಿಯಾಗಿರುವ ನಿವೃತ್ತ ಬಿಎಎಲ್ ಅಧಿಕಾರಿ ಲಕ್ಷ್ಮೀಕಾಂತ ಜಹಾಗೀರಾದಾರ ಅವರ ಮನೆ ಬೀಗ ಮುರಿದು ಕಳ್ಳರು 4.47 ಲಕ್ಷ ರೂ.ಮೌಲ್ಯದ ಚಿನ್ನಾಭರಣ ದೋಚಿಕೊಂಡು ಹೋದ ಬಗ್ಗೆ ಅವರು ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದರು. ಈ ದೂರಿನ ಅನ್ವಯ ತನಿಖೆ ನಡೆಸಲು ಡಿಸಿಪಿ ಪ್ರವೀಣ್ ಹೆಚ್.ನಾಯಕ್, ಕಲಬುರಗಿ ದಕ್ಷಿಣ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಶರಣಬಸಪ್ಪ ಸುಬೇದಾರ, ಸ್ಟೇಷನ್ ಬಜಾರ್ ಪೊಲೀಸ್ ಠಾಣೆ ಪಿಐ ಗುರುಲಿಂಗಪ್ಪಗೌಡ ಪಾಟೀಲ ಅವರ ನೇತೃತ್ವದಲ್ಲಿ ಸಿಬ್ಬಂದಿಗಳಾದ ಪ್ರಭಾಕರ, ಸಿರಾಜ್ ಪಟೇಲ್, ಶಿವಲಿಂಗ, ಯಲ್ಲಪ್ಪ, ಸಂಗಣ್ಣ, ಮೋಸಿನ್, ನೀಲಕಂಠ ಪಾಟೀಲ, ಮಲ್ಲಣ್ಣ, ಚನ್ನವೀರೇಶ ಅವರನ್ನು ಒಳಗೊಂಡ ತಂಡ ರಚಿಸಲಾಗಿತ್ತು. ಈ ತಂಡ ತನಿಖೆ ನಡೆಸಿ ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ ಎಂದು ತಿಳಿಸಿದರು.

ಅಂತರರಾಜ್ಯ ಕುಖ್ಯಾತ ಮನೆಗಳನನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸುವಲ್ಲಿ ಯಶಸ್ವಿಯಾಗಿರು ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಕಾರ್ಯವನ್ನು ಅವರು ಶ್ಲಾಘಿಸಿದರು.

# ಬೌರಿಂಗ್ ಆಸ್ಪತ್ರೆ ದುರಂತ: ಲೋಕಾದಿಂದ ಸ್ವಯಂಪ್ರೇರಿತ ದೂರು ದಾಖಲು



**ಬೆಂಗಳೂರು,ಏ. 30**–ಶಿವಾಜಿನಗರದ ಬೌರಿಂಗ್ ಆಸ್ಪತ್ರೆಯ ಕಾಂಪೌಂಡ್ ಕುಸಿದು ಏಳು ಮಂದಿ ಬಲಿಯಾದ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಲಾಗಿದ್ದು, ಸ್ವಯಂಪ್ರೇರಿತ ಪ್ರಕರಣ ದಾಖಲಿಸಲಾಗುವುದು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿಎಸ್ ಪಾಟೀಲ್ ಅವರು ತಿಳಿಸಿದ್ದಾರೆ.

ಈ ಪ್ರಕರಣದಲ್ಲಿ ಕೇವಲ ಕೆಳಹಂತದ ಸಿಬ್ಬಂದಿಯನ್ನಷ್ಟೇ ಅಲ್ಲದೆ, ಉನ್ನತ ಮಟ್ಟದ ಅಧಿಕಾರಿಗಳನ್ನೂ ಹೊಣೆಗಾರರನ್ನಾಗಿ ಮಾಡಲಾಗುವುದು. ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಸೇರಿದಂತೆ ಪ್ರಮುಖ ಅಧಿಕಾರಿಗಳನ್ನು ಆರೋಪಿಗಳನ್ನಾಗಿ ಮಾಡಲಾಗುವುದು ಎಂದು ಅವರು ತಿಳಿಸಿದ್ದಾರೆ. ದುರ್ಘಟನೆ ನಡೆದ ಸ್ಥಳಕ್ಕೆ ಇಂದು ಅಧಿಕಾರಿಗಳ ಜೊತೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ ದುರ್ಘಟನೆಗೆ ಕಾರಣವಾದ ಆಡಳಿತ ವ್ಯವಸ್ಥೆಯ ನಿರ್ಲಕ್ಷ್ಯದ ವಿರುದ್ಧ ಕೆಂಡಾಮಂಡಲರಾಗಿದ್ದಾರೆ.

ಕಾಂಪೌಂಡ್‌ನ ಅಡಿಪಾಯ ಅತ್ಯಂತ ದುರ್ಬಲವಾಗಿದ್ದೇ ಈ ದುರಂತಕ್ಕೆ ಪ್ರಮುಖ ಕಾರಣ. ನಗರದಲ್ಲಿ ಪ್ರತಿ ವರ್ಷ ಮಳೆ ಬರುತ್ತದೆ ಎಂಬುದು ಗೊತ್ತಿದ್ದರೂ, ಇಂತಹ ದುರ್ಬಲ ಗೋಡೆಗಳ ಪಕ್ಕದಲ್ಲಿ ಬೀದಿ ಬದಿ ವ್ಯಾಪಾರಿಗಳಿಗೆ ಅವಕಾಶ ನೀಡಿರುವುದು ಅಧಿಕಾರಿಗಳ ಬೇಜವಾಬ್ದಾರಿ' ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕೇವಲ ಒಂದು ಗಂಟೆ ಮಳೆ ಬಂದಿದ್ದಕ್ಕೇ ಗೋಡೆ ಕುಸಿಯುತ್ತಿದೆ ಎಂದರೆ ಕಾಮಗಾರಿಯ ಗುಣಮಟ್ಟ ಎಷ್ಟಿರಬಹುದು ಎಂದು ಅವರು ಪ್ರಶ್ನಿಸಿದ್ದಾರೆ.

ಬೌರಿಂಗ್ ಆಸ್ಪತ್ರೆ ಆವರಣದ ಇನ್‌ಚಾರ್ಜ್ ಹರೀಶ್ ಕುಮಾರ್‌ನನ್ನು ಕಚೇರಿಗೆ ಕರೆಸಿ ವಿಚಾರಣೆ ನಡೆಸಲು ಲೋಕಾಯುಕ್ತರು ಸೂಚಿಸಿದ್ದಾರೆ. ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್,ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ,ವೈದ್ಯಕೀಯ ಶಿಕ್ಷಣ ಇಲಾಖೆ ಆಯುಕ್ತ, ಅಪರ ಕಾರ್ಯದರ್ಶಿ, ಐದು ಪಾಲಿಕೆಗಳ ವಲಯ ಆಯುಕ್ತರು ಇವರೆಲ್ಲರನ್ನೂ ಆರೋಪಿಗಳನ್ನಾಗಿ ಮಾಡಿ ಪ್ರಕರಣ ದಾಖಲಿಸಲು ಸಿದ್ಧತೆ ನಡೆಸಲಾಗುತ್ತಿದೆ.

ಕಾಂಗ್ರೆಸ್ ನಿಂದ 5 ಲಕ್ಷ ಪರಿಹಾರ

ಬೌರಿಂಗ್ ಆಸ್ಪತ್ರೆಯ ಗೋಡೆ ಮಳೆಯ ಪರಿಣಾಮ ಕುಸಿದು ಮೃತಪಟ್ಟಿರುವ 7 ಮಂದಿ ಕುಟುಂಬಕ್ಕೆ ಶಾಸಕ ರಿಜ್ವಾನ್ ಅರ್ಷದ್ ಅವರು ಶಿವಾಜಿನಗರ ವಿಧಾನಸಭಾ ಕ್ಷೇತ್ರ ಕಾಂಗ್ರೆಸ್ ಸಮಿತಿ ವತಿಯಿಂದ ಮೃತರ ಪ್ರತಿ ಕುಟುಂಬಕ್ಕೆ 5 ಲಕ್ಷ ಪರಿಹಾರವನ್ನು ಘೋಷಿಸಲಾಗಿದೆ.ರಾಜ್ಯ ಸರ್ಕಾರದಿಂದ ಮೃತರ ಕುಟುಂಬಗಳಿಗೆ 5 ಲಕ್ಷ ಪರಿಹಾರ ಹಾಗೂ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಹೆಚ್ಚುವರಿಯಾಗಿ 2 ಲಕ್ಷ ಸಹಾಯವನ್ನು ನೀಡಲಾಗುತ್ತಿದೆ.

ಈ ದುರ್ಘಟನೆಯಲ್ಲಿ ಪ್ರಾಣ ಕಳೆದುಕೊಂಡ ಕುಟುಂಬಗಳಿಗೆ ಅಗತ್ಯ ಸಹಾಯ ಬೆಂಬಲವನ್ನು ನೀಡಲು ನಾವು ಬದ್ಧರಾಗಿದ್ದು,
ಮೃತರ ಆತ್ಮಕ್ಕೆ ಶಾಂತಿ ಸಿಗಲಿ ಹಾಗೂ ಅವರ ಕುಟುಂಬಗಳಿಗೆ ಈ ನೋವನ್ನು ತಡೆದುಕೊಳ್ಳುವ ಶಕ್ತಿ ದೊರೆಯಲಿ ಎಂದು ಶಾಸಕ ರಿಜ್ವಾನ್ ಅರ್ಷದ್ ಪ್ರಾರ್ಥಿಸಿದ್ದಾರೆ.

# ಮೇ 1ರಿಂದ 5ರ ವರೆಗೆ ದ್ಯಾಮವ್ವ–ದುರ್ಗವ್ವ ಜಾತ್ರೆ

**ಧಾರವಾಡ:** ಇಲ್ಲಿಯ ಮೃತ್ಯುಂಜಯ ನಗರದ ಹಾವೇರಿಪೇಟೆಯ ದ್ಯಾಮವ್ವ–ದುರ್ಗವ್ವ ಜಾತ್ರಾ ಮಹೋತ್ಸವ ಮೇ 1ರಿಂದ 5ರ ವರೆಗೆ ನಡೆಯಲಿದೆ ಎಂದು ದೇವಸ್ಥಾನ ಅಭಿವೃದ್ಧಿ ಸಮಿತಿ ಅಧ್ಯಕ್ಷ ಕೆ.ಎಸ್. ಭೀಮಣ್ಣವರ ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಮುರುಘಾಮಠದ ಡಾ. ಮಲ್ಲಿಕಾರ್ಜುನ ಸ್ವಾಮೀಜಿ, ಸಾಯಿನಗರದ ಸಿದ್ಧಲಿಂಗ ಶ್ರೀ, ಬಂಕಾಪುರದ ಭಾನುದಾಸ ಸರಪದ, ಹೆಬ್ಬಳ್ಳಿಯ ದತ್ತಾವಧೂತ ಮಹಾರಾಜ ಸಾನ್ನಿಧ್ಯ ವಹಿಸಲಿದ್ದಾರೆ.

ಮೇ 1ರಂದು ಬೆಳಗ್ಗೆ ದೇವಿಯರಿಗೆ ಪೂಜೆ, ಕುಡಿ ತುಂಬುವ, ಮಧ್ಯಾಹ್ನ 12.33ಕ್ಕೆ ದತ್ತಾವಧೂತರ ಸಾನ್ನಿಧ್ಯದಲ್ಲಿ ದೇವಿಯರ ವಿವಾಹ, ಮಲ್ಲಿಕಾರ್ಜುನ ಸ್ವಾಮೀಜಿ ಪ್ರವಚನ ಬಳಿಕ ಸಾಂಸ್ಕೃತಿಕ ಕಾರ್ಯಕ್ರಮ, ಬಳಿಕ ಮಹಾಪ್ರಸಾದ ಜರುಗಲಿದೆ ಎಂದರು. ಮೇ 2ರಂದು ಬೆಳಗ್ಗೆ ದೇವಿಯರಿಗೆ ಪೂಜೆ, ದತ್ತಾತ್ರೇಯ ವೆಂಕಟೇಶ ಜೋಶಿ ಅವರಿಂದ ಚಂಡಿಕಾ ಹೋಮ ಮತ್ತು ಜನರಿಂದ ದೇವಿಯರಿಗೆ ಉಡಿ ತುಂಬುವ ಕಾರ್ಯಕ್ರಮ, ಸಿದ್ಧಲಿಂಗ ಶ್ರೀ ಪ್ರವಚನ ಬಳಿಕ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿವೆ ಎಂದರು.

ಮೇ 3ರಂದು ದೇವಿಯರಿಗೆ ಪೂಜೆ, ನಂತರ ದೇವಿಯರ ಹೊನ್ನಾಟ ನಡೆಯಲಿದೆ. ಮಧ್ಯಾಹ್ನ ಮಹಾಪ್ರಸಾದ, ಭಾನುದಾಸ ಸರಪದ ಅವರಿಂದ ಕೀರ್ತನ ಕಾರ್ಯಕ್ರಮ ಸೇರಿ ರಾತ್ರಿ ಬಸಮ್ಮ ಸುಲ್ತಾನಪುರಿ ಹಾಗೂ ಲಕ್ಕಣ್ಣ ಬುಂಚನೂರ ಅವರಿಂದ ಸವಾಲ್ ಜವಾಬ್ ಪದ ನಡೆಯಲಿದೆ. ಮೇ 4ಕ್ಕೆ ದೇವಿಯರಿಗೆ ಪೂಜೆ, ಮೇ 5ಕ್ಕೆ ಬೆಳಗ್ಗೆ ದೇವಿಯರಿಗೆ ಪೂಜೆ, ನಂತರ ಕುಂಭಮೇಳ, ದೇವಿಯರ ಭವ್ಯ ಮೆರವಣಿಗೆ ನಿಗದಿತ ರಸ್ತೆಯಲ್ಲಿ ಸಾಗಲಿದೆ. ಮಾಹಿತಿಗೆ 9448590704 ಅಥವಾ 9448235772 ಸಂಪರ್ಕಿಸಬಹುದು ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ವಿಜಯ ಭೋಸಲೆ, ಶಂಕರ ಕದಂ, ಆರ್. ಜೆ. ಕಟಗೇರಿ ಹಾಗೂ ಜಮಾದಾರ ಇದ್ದರು.

ಸುದ್ದಿ ಮತ್ತು
ಜಾಹೀರಾತಿಗಾಗಿ
ಸಂಪರ್ಕಿಸಿ
6360866626

# ಪ್ರಶಸ್ತಿ ಸಮ್ಮಾನಗಳನ್ನು ಬಯಸಿದವನಲ್ಲ: ಪಟ್ಟಣ್ ಶೆಟ್ಟರ್

**ಕಲ್ಬುರ್ಗಿ: ಏ.30:**ಕರ್ನಾಟಕ ರಾಜ್ಯ ವೈಜ್ಞಾನಿಕ ಪರಿಷತ್ತುನವರು ನನಗೆ ಕಾಯಕಯೋಗಿ ಪ್ರಶಸ್ತಿಯನ್ನು ಕಾರ್ಮಿಕರ ಜಯಂತಿಯ ದಿನ ಪ್ರಧಾನ ಮಾಡಲು ತೀರ್ಮಾನಿಸಿದ್ದಕ್ಕೆ ಕೃತಜ್ಞತೆಗಳು. ನಾನು ಎಂದೂ ಯಾವುದೇ ಪ್ರಶಸ್ತಿ– ಪ್ರಶಂಸೆ, ಮಾನ ಸಂಮಾನಗಳನ್ನು ಬಯಸಿದವನಲ್ಲ. ಎನ್ನ ವಾಮ ಕ್ಷೇಮ ನಿಮ್ಮದಯ್ಯ, ಎನ್ನ ಹಾನಿ ವೃದ್ಧಿ ನಿಮ್ಮದಯ್ಯ, ಎನ್ನ ಮಾನ ಅಪಮಾನ ನಿಮ್ಮದಯ್ಯ ಬಳ್ಳಿಗೆ ಕಾಯಿ ದಿಮ್ಮಿತ್ತೇ ಕೂಡಲಸಂಗಮದೇವ ಎಂಬ ಬಸವಣ್ಣನವರ ವಚನದಂತೆ ಕಳೆದ ಐದು ದಶಕಗಳಿಂದ ದ್ವಿತೀಯ ಯಡಿಯೂರು ಸಿದ್ದಲಿಂಗೇಶ್ವರರೇ ಆಗಿದ್ದ, ಪೂಜ್ಯ ಲಿಂಗೈಕ್ಯ ಶ್ರೀ ತೋಂಟದ ಸಿದ್ಧಲಿಂಗ ಮಹಾ ಸ್ವಾಮಿಗಳ ನಿಷ್ಕಲ್ಮಶ ಪ್ರೀತಿ,ಅಂತ :ಕರಣ, ಅಭಿಮಾನ ಕಾರಣವಾಗಿ ಸಾಧ್ಯವಾದ ಸೇವೆಯನ್ನು ಸಲ್ಲಿಸಿದ್ದೇನೆ

. ಅವರನ್ನು ಹಾಗೂ ಸದ್ಯದ ಹುಚ್ಚ ಗುರುಗಳಾದ ತೋಂಟದ ಡಾ. ಸಿದ್ದರಾಮ ಮಹಾಸ್ವಾಮಿಗಳನ್ನು ಗ ಸಹ ಸ್ಮರಿಸುತ್ತೇನೆ. ಇದನ್ನು ಪಡೆಯಲು ಹೋಗಬೇಕೆಂದು ಈ ಪರಿಷತ್ತಿನ ಪದಾಧಿಕಾರಿಗಳು ಮತ್ತು ನನ್ನ ಬಗ್ಗೆ ಅಭಿಮಾನ ಹೊಂದಿದ ಕೆಲವು ಜನ ಶರಣೆಯರ– ಶರಣರ ಒತ್ತಾಸೆಯಂತೆ ಹೋಗುತ್ತಿದ್ದೇನೆ. ನನ್ನ ಬಗ್ಗೆ ಪ್ರೀತಿ ಅಭಿಮಾನ ಅಂತ:ಕರಣದಿಂದ ಅಭಿನಂದನೆ ಕಳಿಸಿದ ತಮಗೆ ನನ್ನ ಕೃತಜ್ಞತೆಗಳು.



ತಮ್ಮ ಎಂದು ಜಗದ್ಗುರು ತೋಂಟದಾರ್ಯ ವಿದ್ಯಾಪೀಠ ಕಾರ್ಯದರ್ಶಿಗಳಾದ ಪ್ರೊ ಎಸ್ ಎಸ್ ಪಟ್ಟಣ್ ಶೆಟ್ಟರ್ ತಿಳಿಸಿದ್ದಾರೆ.

# ಚುನಾವಣಾ ವ್ಯವಸ್ಥೆ ಸರಿಪಡಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ: ಮಲಕೂಡ



**ಕಲಬುರಗಿ,ಏ.30**–ನಗರದ ಕರ್ನಾಟಕ ಪೀಪಲ್ಸ್ ಎಜುಕೇಶನ್ ಸೊಸೈಟಿಯ ಸಿದ್ಧಾರ್ಥ ಕಾನೂನು ಮಹಾವಿದ್ಯಾಲಯ ಹಾಗೂ ಭಾರತೀಯ ಚುನಾವಣಾ ಸುಧಾರಣಾ ಹೋರಾಟ ಸಮಿತಿ ಸಂಯುಕ್ತ ಆಶ್ರಯದಲ್ಲಿ 'ಚುನಾವಣೆಗಳಲ್ಲಿ ಹಣಬಲ ನಿಯಂತ್ರಿಸಿ– ಪ್ರಜಾಪ್ರಭುತ್ವ ಉಳಿಸಿ' ರಾಷ್ಟ್ರೀಯ ವಿಚಾರ ಸಂಕೀರ್ಣವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಸಹಕಾರ ಇಲಾಖೆಯ ಜಂಟಿ ನಿಬಂಧಕರಾದ ವಿಶ್ವನಾಥ ಮಲಕೂಡ ಮಾತನಾಡುತ್ತ, ಇವತ್ತು ಚುನಾವಣೆಗಳಲ್ಲಿ ಅನಕ್ಷರಸ್ಥರು ಬಡವರು ಕೂಲಿಕಾರರು ಹಣ ಪಡೆಯುತ್ತಿದ್ದಾರೆ ಎನ್ನುತ್ತೇವೆ, ಹಾಗಾದರೆ ಶಿಕ್ಷಣ ಪಡೆದವರು ಶ್ರೀಮಂತರು,ಮಧ್ಯಮ ವರ್ಗದವರು ಪಡೆಯುತ್ತಿಲ್ಲವೇ ? ಅವರು ಕೂಡಾ ಚುನಾವಣೆಯಲ್ಲಿ ಹಣ ಪಡೆಯುತ್ತಿದ್ದಾರೆ. ಇದು ಇಂದು ಮನುಷ್ಯರಲ್ಲಿ ಹೆಚ್ಚಿರುವ ದುರಾಸೆಯೇ ಇದಕ್ಕೆ ಮೂಲ ಕಾರಣ ಎಂದರು. ಇಂದು ಎಲ್ಲಾ ಚುನಾವಣೆಗಳು ಬಹುತೇಕ ಹಣದ ಮೇಲೆಯೇ ನಡೆಯುತ್ತಿವೆ.ದೇಶದಲ್ಲಿ ಇದು ಅಪಾಯಕಾರಿಯಾದ ಬೆಳವಣಿಗೆ.ಇದನ್ನು ನಿಯಂತ್ರಣವಾಗದೆ ಹೋದಲ್ಲಿ ಪ್ರಜಾಪ್ರಭುತ್ವ ಬಲಿಷ್ಠ ವಾಗಲು ಸಾಧ್ಯವಿಲ್ಲ. ಇದೇ ರೀತಿ ಚುನಾವಣೆಗಳಲ್ಲಿ ಹಣಬಲ ಮುಂದುವರೆಯುತ್ತಾ ಹೋದರೆ ದೇಶಕ್ಕೆ ಅಪಾಯ ಕಾದಿದೆ ಎಂದರು. ನಾವೆಲ್ಲರೂ ಇಂದು ಆತ್ಮಾವಲೋಕನ ಮಾಡಿಕೊಳ್ಳಬೇಕಾಗಿದೆ.ಚುನಾವಣೆಗಳಲ್ಲಿ ರಾಜಕಾರಣಿಗಳು ಮತದಾರರಿಗೆ ಹಣ ಕೊಟ್ಟು ಮತದಾರರ ನೈತಿಕತೆಯನ್ನು ಕೊಲ್ಲುತ್ತಿದ್ದಾರೆ. ಮತದಾರರು ಕೂಡ ಅಷ್ಟೇ ಚುನಾವಣೆಯಲ್ಲಿ ರಾಜಕಾರಣಿಗಳಿಂದ ಹಣ ಪಡೆದು ತಮ್ಮ ನೈತಿಕತೆಯನ್ನೇ ಕಳೆದುಕೊಳ್ಳುತ್ತಿದ್ದಾರೆ ಎಂದರು. ಒಟ್ಟಾರೆ ಇಡೀ ಚುನಾವಣಾ ವ್ಯವಸ್ಥೆಯನ್ನು ಸರಿಪಡಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದ್ದು ಈ ನಿಟ್ಟಿನಲ್ಲಿ ನಾವೆಲ್ಲರೂ ಕಾರ್ಯಪ್ರವೃತ್ತ ರಾಗಬೇಕಾಗಿದೆ ಎಂದು ಕಾನೂನು ವಿದ್ಯಾರ್ಥಿಗಳಿಗೆ ತಿಳಿಸಿದರು.
'ಚುನಾವಣೆಗಳಲ್ಲಿ ಹಣಬಲ ನಿಯಂತ್ರಿಸಿ– ಪ್ರಜಾಪ್ರಭುತ್ವ ಉಳಿಸಿ' ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ವಿದ್ಯಾರ್ಥಿಗಳಾದ ಶ್ರದ್ಧಾಶಕ್ತಿ, ಮಲಕಪ್ಪ ಕರಗೊಂಡ, ನಿಶಾಂತ, ಪಲ್ಲವಿ ಕುಲಕರ್ಣಿ ,ಬ್ರಿಜೇಶ್, ಭವಾನಿ, ಅರುಣಕುಮಾರ, ರಿತೇಶ ಸುಮಿತ್, ಶ್ರದ್ಧಾ ಕೆ, ಮತ್ತು ಪ್ರತಿಭಾ ಅತ್ಯುತ್ತಮವಾಗಿ ಮಾತನಾಡಿದ್ದಕ್ಕಾಗಿ ಅಭಿನಂದನಾ ಪತ್ರವನ್ನು ನೀಡಿ ಗೌರವಿಸಲಾಯಿತು.
ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲರಾದ ಡಾ: ಚಂದ್ರಶೇಖರ ಶೀಲವಂತ ಮಾತನಾಡುತ್ತಾ, ನಮ್ಮ ದೇಶದ ನ್ಯಾಯಾಂಗ ವ್ಯವಸ್ಥೆ ಸ್ವತಂತ್ರವಾಗಿದ್ದು ಶಾಸಕಾಂಗ ಮತ್ತು ಕಾರ್ಯಾಂಗಗಳಿಗೆ ನಿರ್ದೇಶನ ಮಾಡುವ, ಸಲಹೆ ನೀಡುವ ಅಧಿಕಾರ ಹೊಂದಿದ್ದು,ಕಾನೂನು ವಿದ್ಯಾರ್ಥಿಗಳು ತಮ್ಮ ವ್ಯಾಸಂಗದ ಸಮಯದಲ್ಲಿ ಅಧ್ಯಯನದ ಕಡೆಗೆ ಹೆಚ್ಚು ಗಮನಕೊಟ್ಟು ತಮ್ಮ ಜೀವನದಲ್ಲಿ ಒಳ್ಳೆಯ ನ್ಯಾಯವಾದಿಗಳಾಗಿ ಸಮಾಜದಲ್ಲಿ ನ್ಯಾಯದ ಪರ ಹೋರಾಡುವವರಾಗಬೇಕು ಎಂದು ಕಾನೂನು ವಿದ್ಯಾರ್ಥಿಗಳಿಗೆ ತಿಳಿಸಿದರು. ಚುನಾವಣೆಗಳಲ್ಲಿ ಹೆಚ್ಚುತ್ತಿರುವ ಹಣಬಲದಿಂದ ಸಮಾಜದಲ್ಲಿ ದೇಶದಲ್ಲಿ ಮೋಸ ವಂಚನೆ ಹಾಗೂ ಭ್ರಷ್ಟಾಚಾರ ಹೆಚ್ಚಳಕ್ಕೆ ಕಾರಣವಾಗುತ್ತಿದೆ ಎಂದರು.
ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಭಾರತೀಯ ಚುನಾವಣಾ ಸುಧಾರಣಾ ಹೋರಾಟ ಸಮಿತಿ ಸಂಸ್ಥಾಪಕರಾದ ರಮೇಶ ಆರ್. ದುತ್ತರಗಿ ಮಾತಾಡುತ್ತಾ, ನಾನು ಮತದಾರರ ಪಟ್ಟಿಯಲ್ಲಿ ತಪ್ಪದೇ ನನ್ನ ಹೆಸರನ್ನು ನೋಂದಾಯಿಸುತ್ತೇನೆ.ನಾನು ಚುನಾವಣೆಗಳಲ್ಲಿ ಯಾವುದೇ ಆಸೆ ಆಮಿಷಗಳಿಗೆ ಬಲಿಯಾಗದೆ ತಪ್ಪದೆ ಮತದಾನ ಮಾಡುತ್ತೇನೆ.ಕ್ರಿಮಿನಲ್ ಆರೋಪ ಹಿನ್ನೆಲೆಯುಳ್ಳ ಅಭ್ಯರ್ಥಿಗಳಿಗೆ ಮತ ಹಾಕುವುದಿಲ್ಲ.ಚುನಾವಣೆಗಳಲ್ಲಿ ಸ್ಪರ್ಧಿಸಿದ ಅಭ್ಯರ್ಥಿಗಳು ನನಗೆ ಸರಿ ಎನಿಸದೆ ಇದ್ದಲ್ಲಿ ನಾನು ನೋಟಕ್ಕಾದರೂ ಮತ ಹಾಕುತ್ತೇನೆ.ಎಂದು ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು.
ಎನ್‌ಎಸ್‌ಎಸ್ ಸಂಯೋಜಕರು ಹಾಗೂ ಉಪನ್ಯಾಸಕರಾದ ಕಾಶಿನಾಥ ಜವಳಿ, ಮಾನವ ಹಕ್ಕುಗಳ ಸಮಿತಿ ಸಂಯೋಜಕರು ಉಪನ್ಯಾಸಕರಾದ ಕವಿತಾ ಎನ್ .ಜಿ , ವೇದಿಕೆಯಲ್ಲಿ ಉಪಸ್ಥಿತರಿದ್ದರು.ಕಾನೂನು ವಿದ್ಯಾರ್ಥಿ ಸುಮಿತ್ ಕಾರ್ಯಕ್ರಮವನ್ನು ನಿರೂಪಿಸಿದರು.ವಿದ್ಯಾರ್ಥಿನಿಯರಾದ ವೀಣಾ ಸ್ವಾಗತಿಸಿದರು ಬೋರಮ್ಮ ವಂದನಾರ್ಪಣೆ ಮಾಡಿದರು. ಕಾರ್ಯಕ್ರಮದಲ್ಲಿ ಶಿಕ್ಷಕ ಹಾಗೂ ಶಿಕ್ಷಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕೈಗಾರಿಕೆ, ಪ್ರವಾಸೋದ್ಯಮ ಅಭಿವೃದ್ಧಿಗೆ ಒತ್ತು



**ಹುಬ್ಬಳ್ಳಿ,ಏ30:** ಸಂಸ್ಥೆಯು ಆಯೋಜಿಸಿದ್ದ ಇನ್‌ಕಾಮೆಕ್ಸ್–2026ರ ಬೃಹತ್ ಕೈಗಾರಿಕಾ ವಸ್ತು ಪ್ರದರ್ಶನದ ಅಂಗವಾಗಿ "ಉತ್ತರ ಕರ್ನಾಟಕ ಅಭಿವೃದ್ಧಿ ಸಮಾವೇಶ" ಕಾರ್ಯಕ್ರಮವು ಯಶಸ್ವಿಯಾಗಿ ಜರುಗಿತು.


ಮುಖ್ಯ ಅತಿಥಿಗಳಾಗಿ ಆಗಮಿಸಿ ಕಾರ್ಯಕ್ರಮ ಉದ್ಘಾಟಿಸಿದ ಕಾನೂನು ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ಉತ್ತರ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಗೆ ಕೈಗಾರಿಕೆಗಳ ವಿಸ್ತರಣೆ ಅತ್ಯಂತ ಅಗತ್ಯವಿದೆ. ಈ ಭಾಗದಲ್ಲಿ ಹೂಡಿಕೆಗಳನ್ನು ಆಕರ್ಷಿಸಲು ಸುಧಾರಿತ ಮೂಲ ಸೌಕರ್ಯ, ಕೈಗಾರಿಕಾ ವಲಯಗಳಿಗೆ ಭೂಮಿಯ ಲಭ್ಯತೆ ಮತ್ತು ಉದ್ಯಮ ಸ್ನೇಹಿ ನೀತಿಗಳನ್ನು ಸರ್ಕಾರ ರೂಪಿಸುತ್ತಿದೆ ಎಂದು ತಿಳಿಸಿದರು.

ಪ್ರವಾಸೋದ್ಯಮವನ್ನು ಕೈಗಾರಿಕಾ ವಲಯದ ಸಮಾನ ಮಹತ್ವದ ಕ್ಷೇತ್ರವಾಗಿ ಪರಿಗಣಿಸಿರುವ ಸರ್ಕಾರ, ಪ್ರವಾಸೋದ್ಯಮ ಕೈಗಾರಿಕಾ ನೀತಿಯಡಿ ಬಂಡವಾಳ ಹೂಡಲು ಮುಂದಾಗುವ ಹೋಟೆಲ್ ಉದ್ಯಮಿಗಳಿಗೆ ಅಗತ್ಯವಾದ ಎಲ್ಲಾ ರೀತಿಯ ಸಹಾಯ–ಸಹಕಾರ, ಸೌಲಭ್ಯಗಳು ಹಾಗೂ ಪ್ರೋತ್ಸಾಹವನ್ನು ನೀಡಲು ಬದ್ಧವಾಗಿದೆ ಎಂದು ಅವರು ತಿಳಿಸಿದರು. ಇದೇ ಸಂದರ್ಭದಲ್ಲಿ ಇನ್‌ಕಾಮೆಕ್ಸ್ –2026 ಪ್ರಯುಕ್ತ ಸಂಸ್ಥೆಯು ಪ್ರಕಟಿಸಿರುವ ಸ್ಮರಣ ಸಂಚಿಕೆಯನ್ನು ಸಚಿವರು ಬಿಡುಗಡೆ ಮಾಡಿದರು. ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಎಫ್. ಹೆಚ್. ಜಕ್ಕಪ್ಪನವರ ಆಗಮಿಸಿದ್ದರು.

ಸಂಸ್ಥೆಯ ಅಧ್ಯಕ್ಷ ಜಿ.ಕೆ. ಅದಪ್ಪಗೌಡರ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷರಾದ ಪ್ರವೀಣ್ ಅಗಡಿ, ಸಿದ್ಧೇಶ್ವರ ಕಮ್ಮಾರ, ವೀರಣ್ಣ ಕಲ್ಬುರ್ಗಿ, ಗೌರವ ಕಾರ್ಯದರ್ಶಿ ಉದಯ ರೇವಣಕರ್, ಜೊತೆ ಗೌರವ ಕಾರ್ಯದರ್ಶಿ ಪ್ರಕಾಶ ಶೃಂಗೇರಿ, ಮಾಜಿ ಅಧ್ಯಕ್ಷ ಶಂಕರಣ್ಣ ಮುನವಳ್ಳಿ, ಇನ್‌ಕಾಮೆಕ್ಸ್ ಸಮಿತಿ ಚೇರ್ಮನ್ ಎಂ.ಎ. ಕರಮರಿ, ಕೋ–ಚೇರ್ಮನ್ ಜಯಪ್ರಕಾಶ ತೆಂಗಿನಕಾಯಿ ಸೇರಿದಂತೆ ಅನೇಕ ಗಣ್ಯರು, ಉದ್ಯಮಿಗಳು ಮತ್ತು ರಫ್ತುದಾರರು ಉಪಸ್ಥಿತರಿದ್ದರು.

# ಲಾರಿ ಟ್ಯಾಂಕರ್ ಕಾರು ನಡುವೆ ಅಪಘಾತ

**ಕಲಬುರಗಿ,ಏ.29**–ಲಾರಿ ಟ್ಯಾಂಕರ್ ಮತ್ತು ಕಾರು ನಡುವೆ ಡಿಕ್ಕಿ ಸಂಭವಿಸಿರುವ ಘಟನೆ ಫರಹತಾಬಾದ ಬಳಿ ಇಂದು ನಡೆದಿದೆ.
ಅಪಘಾತದಲ್ಲಿ ಕಾರಿನ ಮುಂಭಾಗ ನಜ್ಜುಗುಜ್ಜಾಗಿದ್ದು, ಕಾರಿನಲ್ಲಿದ್ದವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ತಿಳಿದುಬಂದಿದೆ.
ಅಪಘಾತದಿಂದಾಗಿ ಕೆಲಕಾಲ ವಾಹನ ಸಂಚಾರಕ್ಕೆ ಅಡುಚಣೆಯುಂಟಾಗಿತ್ತು ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.



# ತಂಬಾಕು ಹರಾಜು ಕಾರ್ಯ ವಿಧಾನ ಸುಧಾರಿಸಿ



**ಮೈಸೂರು: ಏ.30:–** ತಂಬಾಕು ಬೆಳೆಗಾರರು ಅನುಭವಿಸುತ್ತಿರುವ ಸಮಸ್ಯೆ ಪರಿಹರಿಸಲು, ಹರಾಜು ಕಾರ್ಯ ವಿಧಾನದಲ್ಲಿ ಸುಧಾರಣೆ ತರಲು ಎಲ್ಲ ರೀತಿಯ ಕ್ರಮ ಕೈಗೊಳ್ಳಬೇಕು ಎಂದು ಕೇಂದ್ರ ಸಚಿವರಿಗೆ ಮನವಿ ಮಾಡಲಾಗಿದೆ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದ್ದಾರೆ.

ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಅವರನ್ನು ನವದೆಹಲಿಯಲ್ಲಿ ಭೇಟಿ ಮಾಡಿ ಮನವಿ ಪತ್ರ ಸಲ್ಲಿಸಿದ ನಂತರ ಯದುವೀರ್ ಒಡೆಯರ್ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿದ್ದಾರೆ. ಪ್ರಸಕ್ತ ಋತುವಿನಲ್ಲಿ ಸಮಗ್ರ ಅವಲೋಕನ, ರೈತರು ಎದುರಿಸುತ್ತಿರುವ ಸವಾಲುಗಳಿಗೆ ದೀರ್ಘಾವಧಿಯ ರಚನಾತ್ಮಕ ಪರಿಹಾರ ಒದಗಿಸಲು ತುರ್ತು ಕ್ರಮ, ಏಕಸ್ವಾಮ್ಯ ನಿಯಂತ್ರಣ ತಪ್ಪಿಸುವುದು ಸೇರಿದಂತೆ ಹಲವಾರು ವಿಷಯಗಳ ಕುರಿತು ಕೇಂದ್ರ ಸಚಿವರೊಂದಿಗೆ ಚರ್ಚಿಸಲಾಯಿತು ಎಂದು ತಿಳಿಸಿದ್ದಾರೆ.

ಹೊಸ ಯೋಜನೆಗಳಿಗೆ ಚಿಂತನೆ ಅಗತ್ಯ: ಹರಾಜು ಪ್ರಕ್ರಿಯೆಯಲ್ಲಿ ವಿದೇಶಿ ಖರೀದಿದಾರರ ವ್ಯಾಪಕ ಭಾಗವಹಿಸುವಿಕೆಯನ್ನು ಅನುಮತಿಸುವ ಪ್ರಾಮುಖ್ಯತೆ ಬಗ್ಗೆ ಗಮನ ಸೆಳೆಯಲಾಯಿತು. ಹೊಸ ಯೋಜನೆಗಳಿಗೆ ಚಿಂತನೆ ಅಗತ್ಯವಿದೆ. ರೈತರಿಗೆ ಪಾರದರ್ಶಕತೆ, ನ್ಯಾಯಯುತ ಬೆಲೆ ಆವಿಷ್ಕಾರ ಮತ್ತು ಸಂಗ್ರಹಣೆಯಲ್ಲಿ ಸ್ಥಿರತೆಯನ್ನು ಖಚಿತಪಡಿಸಿಕೊಳ್ಳಲು ಹರಾಜು ಕಾರ್ಯವಿಧಾನಗಳಲ್ಲಿ ಸುಧಾರಣೆಗಳಿಗೆ ಆದ್ಯತೆ ನೀಡಬೇಕು ಎಂದು ಇದೇ ಸಂದರ್ಭದಲ್ಲಿ ಪಿಯೂಷ್ ಗೋಯಲ್ ಅವರಿಗೆ ಮನವರಿಕೆ ಮಾಡಿಕೊಡಲಾಯಿತು ಎಂದು ಯದುವೀರ್ ವಿವರಿಸಿದ್ದಾರೆ.

ಅಕ್ರಮ ಸಿಗರೇಟ್ ಹೆಚ್ಚಳವಾಗುತ್ತಿರುವ ಬಗ್ಗೆ ಕಳವಳ ವ್ಯಕ್ತಪಡಿಸಲಾಯಿತು, ರೈತರು ಮತ್ತು ಕಾನೂನುಬದ್ಧ ಉದ್ಯಮದ ಪಾಲುದಾರರನ್ನು ರಕ್ಷಿಸಲು ಕಠಿಣ ನಿಯಂತ್ರಣ ಮತ್ತು ಸುಧಾರಣಾ ಯೋಜನೆಗಳನ್ನು ಜಾರಿಗೊಳಿಸುವಿಕೆ ಅನಿವಾರ್ಯತೆ ಬಗ್ಗೆ ಮಾಹಿತಿ ನೀಡಲಾಗಿದೆ ಎಂದು ಹೇಳಿದ್ದಾರೆ.
ರೈತರ ಜೀವನೋಪಾಯ ರಕ್ಷಿಸುವುದು, ಸ್ಥಿರ ಆದಾಯ ಖಚಿತಪಡಿಸುವುದು ಮತ್ತು ಎಲ್ಲ ಸವಾಲುಗಳಿಗೆ ಪರಿಹಾರ ಒದಗಿಸಬೇಕಾಗಿದೆ. ಈ ಕ್ಷೇತ್ರವನ್ನು ಇನ್ನಷ್ಟು ಅಭಿವೃದ್ಧಿಗೊಳಿಸಲಾಗಿದೆ ಎಂದು ಮನವಿ ಸಲ್ಲಿಸಲಾಗಿದೆ ಎಂದು ಯದುವೀರ್ ತಿಳಿಸಿದ್ದಾರೆ.

ಕಾಫಿ ಮಂಡಳಿ ಸಮಸ್ಯೆ ನಿವಾರಿಸಿ: 2015ರಲ್ಲಿ ಸಾಲ ಮನ್ನಾ ಖಾತರಿಪಡಿಸಿದ ಬಗ್ಗೆ, ಕೊಡಗು ಕಾಫಿ ಸಹಕಾರಿ ಸಂಘ ಮತ್ತು ಕಾಫಿ ಮಂಡಳಿಯ ನಡುವೆ ದೀರ್ಘಕಾಲದಿಂದ ಬಾಕಿ ಇರುವ ಸಮಸ್ಯೆ ಚರ್ಚಿಸಲಾಯಿತು. ನ್ಯಾಯಾಲಯದ ನಿರ್ದೇಶನ ಇರುವುದರಿಂದ ಈ ವಿಷಯದಲ್ಲಿ ಕ್ರಮ ಕೈಗೊಳ್ಳಬೇಕಾಗಿದೆ. ಇದರಿಂದ ಸಣ್ಣ ಬೆಳೆಗಾರರು ಕೂರ್ಗ್, ಕೊಡಗು ಕಾಫಿ ಬ್ರ್ಯಾಂಡ್ ಅನ್ನು ಮೇಲ್ಮಟ್ಟಕ್ಕೆ ಕೊಂಡೊಯ್ಯಲು ಅನುಕೂಲವಾಗುತ್ತದೆ. ಸಹಕಾರಿ ಸಂಸ್ಥೆಯನ್ನು ಬೆಂಬಲಿಸಲು ಸಕಾಲಿಕ ಕ್ರಮ ಕೈಗೊಳ್ಳಬೇಕೆಂದು ಪಿಯೂಷ್ ಗೋಯಲ್ ಅವರಿಗೆ ಮನವಿ ಮಾಡಿದ್ದೇನೆ ಎಂದು ಸಂಸದ ಯದುವೀರ್ ಒಡೆಯರ್ ತಿಳಿಸಿದ್ದಾರೆ.

# ಸಲಹಾ ಚೀಟಿ ಇಲ್ಲದೆ ಔಷಧ ಕೊಡುವಂತಿಲ್ಲ



**ಮೈಸೂರು: ಏ.30:–** ಔಷಧ ಮಾರಾಟ ಅಂಗಡಿಗಳು ಔಷಧ ಮತ್ತು ಕಾಂತಿವರ್ಧಕ ಅದಿನಿಯಮ 1940ರ ಅನುಸೂಚಿ ಎಚ್ಎಚ್ 1ಮತ್ತು ಎಕ್ಸ್ ಅಡಿಯಲ್ಲಿ ಬರುವ ಮತ್ತು ಬರಿಸುವ, ಅಮಲುಕಾರಕ, ರೋಗನಿರೋಧಕ ಮತ್ತು ಇತರೆ ಔಷಧಿಗಳನ್ನು ವೈದ್ಯರ ಸಲಹಾ ಚೀಟಿ ಇಲ್ಲದೆ ಮಾರಾಟ ಮಾಡುವುದು ಕಂಡುಬಂದಲ್ಲಿ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು ಎಂದು ನಾರ್ಕೋ ಸಮಿತಿಯ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ.ಜಿ ಎಚ್ಚರಿಕೆ ನೀಡಿದರು.

ನ್ಯೂ ಸಯ್ಯಾಜಿರಾವ್ ರಸ್ತೆಯಲ್ಲಿರುವ ರಘುಲಾಲ್ ಔಷಧ ಮಾರಾಟ ಕೇಂದ್ರಕ್ಕೆ ದಿಢೀರ್ ಭೇಟಿ ನೀಡಿ ಔಷಧ ಮತ್ತು ಕಾಂತಿ ವರ್ಧಕ ನಿಯಮ 1940ರ ಅನುಸೂಚಿ ಎಚ್1 ಮತ್ತು ಎಕ್ಸ್ ಅಡಿ ಬರುವ ಔಷಧಗಳ ಮಾರಾಟದ ಬಿಲ್‌ಗಳು, ವೈದ್ಯರ ಸಲಹಾ ಚೀಟಿ ಪಡೆದು ಪರಿಶೀಲನೆ ನಡೆಸಿದರು.

ನಂತರ ಮಾತನಾಡಿದ ಅವರು ಅಮಲುಕಾರಕ ರೀತಿಯ ಔಷಧಿಗಳನ್ನು ವೈದ್ಯರ ಸಲಹಾ ಚೀಟಿ ಇಲ್ಲದೆ ಖರೀದಿಸಿ ಯುವ ಜನತೆ ಮಾದಕ ವಸ್ತುಗಳ ಬಳಕೆಯ ಜಾಲದಲ್ಲಿ ಸಿಲುಕುತ್ತಿದ್ದಾರೆ. ಔಷಧ ಮಾರಾಟ ಮಳಿಗೆಗಳು ಜಿಲ್ಲಾಡಳಿತ ಹಾಗೂ ಸರ್ಕಾರದಿಂದ ನೀಡಲಾಗುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಔಷಧ ಮಾರಾಟ ಅಂಗಡಿಗಳ ಮುಂಭಾಗದಲ್ಲಿ ಸಾರ್ವಜನಿಕರಿಗೆ ಕಾಣುವ ರೀತಿ ಹೆಚ್, ಹೆಚ್1 ಮತ್ತು ಎಕ್ಸ್ ಅಡಿ ಬರುವ ಔಷಧಿಗಳ ಖರೀದಿಗೆ ವೈದ್ಯರ ಸಲಹಾ ಚೀಟಿ ಕಡ್ಡಾಯ ಎಂದು ಪ್ರಕಟಿಸಬೇಕು ಎಂದರು.

ಔಷಧ ಮತ್ತು ಕಾಂತಿ ವರ್ಧಕ ನಿಯಮ 1940ರ ಅನುಸೂಚಿ ಹೆಚ್, ಹೆಚ್1 ಮತ್ತು ಎಕ್ಸ್ ಅಡಿ ಅಲ್ಪ್ರಜೋಲಮ್, ಕೊಡೈನ್, ಟಪೆಂಟಾಲ್ ಸೇರಿದಂತೆ ಒಟ್ಟು 50 ವಿದಧ ಔಷಧಿಗಳಿವೆ ಅವುಗಳ ಸ್ಟಾಕ್, ಮಾರಾಟ, ವೈದ್ಯರ ಸಲಹಾ ಚೀಟಿ ಹಾಗೂ ಬಿಲ್‌ಗಳ ದಾಖಲೆಗಳನ್ನು ಔಷಧಿ ಮಾರಾಟ ಮಳಿಗೆಗಳು ಇಡಬೇಕು. ಅಧಿಕಾರಿಗಳು ಪರಿಶೀಲನೆಗೆ ಬಂದ ಸಂದರ್ಭದಲ್ಲಿ ಹಾಜರುಪಡಿಸಬೇಕು ಎಂದರು.
ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಮಾತನಾಡಿ, ಜಿಲ್ಲೆಯಲ್ಲಿ ಬಹಳಷ್ಟು ಔಷಧಿ ಮಾರಾಟ ಕೇಂದ್ರಗಳಿದ್ದು, ಎಲ್ಲವನ್ನೂ ಔಷಧೀಯ ನಿಯಂತ್ರಕರು ಪರಿಶೀಲಿಸುವುದು ಕಷ್ಟವಾಗಿದ್ದು, ಪೊಲೀಸ್ ಇಲಾಖೆಯಿಂದಲೂ ಪರಿಶೀಲನೆಯನ್ನು ತೀವ್ರಗೊಳಿಸಲಾಗುವುದು ಎಂದರು.

ಪರಿಶೀಲನೆಯ ಸಂದರ್ಭದಲ್ಲಿ ಮೈಸೂರು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಸಹಾಯಕ ಔಷಧ ನಿಯಂತ್ರಕರಾದ ಆಶಾ ಲತಾ ಹಾಗೂ ವಾಸೀಂ ಶರೀಫ್ ಉಪಸ್ಥಿತರಿದ್ದರು.

# ಸಕಾಲದಲ್ಲಿ ನೆರವಿಗೆ ದಾವಿಸದ ವಿದ್ಯುತ್ ಇಲಾಖೆ: ರೈತರ ಆಕ್ರೋಶ

**ಕೆ.ಆರ್.ಪೇಟೆ.ಏ.30:** ಸುಟ್ಟುಹೋದ ಟಿ.ಸಿ ಗಳನ್ನು ಸಕಾಲದಲ್ಲಿ ದುರಸ್ಥಿ ಮಾಡದೆ ಅಥವಾ ಹೊಸ ಟಿ.ಸಿ.ಅಳವಡಿಸದೆ ಸೆಸ್ಕಾಂ ನಿರ್ಲಕ್ಷ್ಯ ತೋರಿಸುತ್ತಿದ್ದು ಬಿರು ಬೇಸಿಗೆಯಲ್ಲಿ ರೈತರು ತಮ್ಮ ಬೆಳೆ ರಕ್ಷಣೆ ಮಾಡಿಕೊಳ್ಳುವುದು ಕಷ್ಟಕರವಾಗುತ್ತಿದೆ.

ತಾಲೂಕಿನ ಕಾರಿಗನಹಳ್ಳಿ ಗ್ರಾಮದ ರೈತ ಮಂಜುನಾಥ್ ಎನ್ನುವವರು ತಮ್ಮ ಕೃಷಿ ಭೂಮಿಯಲ್ಲಿ ಕಬ್ಬು ಬೆಳೆದಿದ್ದು ಕಳೆದ ಒಂದು ವಾರದ ಹಿಂದೆ ಅವರ ಭೂಮಿಗೆ ನೀರೆತ್ತುವ ಪಂಪ್ ಸೆಟ್‌ಗೆ ಸಂಪರ್ಕ ಕಲ್ಪಿಸುವ ಟಿ.ಸಿ ಸುಟ್ಟು ಹೋಗಿದೆ. ಈ ಬಗ್ಗೆ ತಕ್ಷಣವೇ ರೈತ ಮಂಜುನಾಥ್ ಆನ್ ಲೈನ್ ಮೂಲಕ ಕಿಕ್ಕೇರಿ ವಿಭಾಗದ ಸೆಸ್ಕಾಂ ಗೆ ದೂರು ಸಲ್ಲಿಸಿದ್ದಾರಲ್ಲದೆ ಖುದ್ದಾಗಿ ಕಿಕ್ಕೇರಿ ವಿಭಾಗದ ಸೆಸ್ಕಾಂ ಅಧಿಕಾರಿಗಳನ್ನು ಸಂಪರ್ಕಿಸಿದ್ದಾರೆ. ರೈತನ ದೂರು ಆಧರಿಸಿ ತಕ್ಷಣವೇ ಟಿ.ಸಿ ದುರಸ್ಥಿ ಮಾಡಬೇಕಾದ ಸೆಸ್ಕಾಂ ಜೆ.ಇ ರವೀಂದ್ರ ಮತ್ತು ಸ್ಟೋರ್ ಕೀಪರ್ ಅನಿಲ್ ಪರಸ್ಪರ ಒಬ್ಬರ ಮೇಲೆ ಮತ್ತೊಬ್ಬರು ಬೆರಳು ತೋರಿಸುತ್ತಾ ರೈತನಿಗೆ ಅಗತ್ಯ ಟಿ.ಸಿ ಒದಗಿಸದೆ ಅನಗತ್ಯವಾಗಿ ಸುತ್ತಾಡಿಸುತ್ತಿದ್ದಾರೆ. ಈ ಬಗ್ಗೆ ಪಟ್ಟಣದ ಸೆಸ್ಕಾಂ ವಿಭಾಗೀಯ ಕಾರ್ಯನಿರ್ವಾಹಕ ಎಂಜಿನಿಯರ್ ಪುಟ್ಟಸ್ವಾಮಿ ಅವರ ಗಮನಕ್ಕೆ ತಂದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ರೈತ ಮಂಜುನಾಥ್ ದೂರಿದ್ದಾರೆ. ಸೆಸ್ಕಂ ನಿರ್ಲಕ್ಷ್ಯಕ್ಕೆ ರೈತ ಮಂಜುನಾಥ್ ಅವರ ಭೂಮಿಯಲ್ಲಿ ಬೆಳೆದು ನಿಂತಿರುವ ಕಬ್ಬಿನ ಬೆಳೆ ಒಣಗಲಾರಂಭಿಸಿದ್ದು ರೈತ ಆತಂಕಕ್ಕೆ ಸಿಲುಕಿದ್ದಾನೆ.

ಸಕಾಲದಲ್ಲಿ ರೈತರಿಗೆ ಅಗತ್ಯ ಟಿ.ಸಿ ಒದಗಿಸಿಕೊಡದ ಸೆಸ್ಕಾಂ ಎಂಜಿನಿಯರುಗಳ ಕಾರ್ಯವೈಕರಿಯನ್ನು ತಾಲೂಕು ರೈತಸಂಘದ ಅಧ್ಯಕ್ಷ ಕಾರಿಗನಹಳ್ಳಿ ಪುಟ್ಟೇಗೌಡ ಖಂಡಿಸಿದ್ದು ಟಿ.ಸಿ ವಿಚಾರದಲ್ಲಿ ರೈತಸಂಘ ಎಷ್ಟೇ ಹೋರಾಟ ಮಾಡುತ್ತಿದ್ದರೂ ಅಧಿಕಾರಿಗಳ ಮನಸ್ಥಿತಿ ಬದಲಾಗುತ್ತಿಲ್ಲ. ಲಂಚವಿಲ್ಲದೆ ಟಿ.ಸಿ ಇಲ್ಲ ಎನ್ನುವ ನಿಲುವಿಗೆ ವಿದ್ಯುತ್ ನಿಗಮದ ಎಂಜಿನಿಯರುಗಳು ಬಂದು ನಿಂತಿದ್ದಾರೆ. ತಾಲೂಕಿನಾದ್ಯಂತ ಬಿರು ಬಿಸಲು ಇದ್ದು ಕೆರೆ ಕಟ್ಟೆಗಳು ಬರಿದಾಗಿವೆ. ಕೃಷಿ ಪಂಪ್ ಸೆಟ್ಟುಗಳು ಭತ್ತಲಾರಂಭಿಸಿವೆ. ಬೆಳೆ ಸಂರಕ್ಷಣೆ ರೈತರಿಗೆ ಸವಾಲಿನ



ಸಂಗತಿಯಾಗಿದೆ. ಇಂತಹ ಕಠಿಣ ಸನ್ನಿವೇಶದಲ್ಲಿ ರೈತರ ನೆರವಿಗೆ ನಿಲ್ಲಬೇಕಾದ ಸೆಸ್ಕಾಂ ಅಧಿಕಾರಿಗಳು ದುರಾಡಳಿತ ಮಾಡುತ್ತಿದ್ದು ರೈತ ಸಮುದಾಯವನ್ನು ಕಾಡುತ್ತಿದ್ದಾರೆ. ಸುಟ್ಟು ಹೋದ ಟಿ.ಸಿ ಗಳನ್ನು ತಕ್ಷಣವೇ ದುರಸ್ಥಿ ಮಾಡುತ್ತೇವೆ ಎಂದು ಜನಸಂಪರ್ಕ ಸಭೆಗಳಲ್ಲಿ ಹೇಳುವ ಅಧಿಕಾರಿಗಳು ತಮ್ಮ ಮಾತನ್ನು ಪಾಲಿಸುತ್ತಿಲ್ಲ. ಟಿ.ಸಿ ಸುಟ್ಟು ಹೋದರೆ ಇಲಾಖೆಯ ಖರ್ಚಿನಲ್ಲಿ ಅದನ್ನು ಸಾಗಿಸಿ ದುರಸ್ಥಿ ಮಾಡಿ ತಂದು ಮತ್ತೆ ಅದೇ ಜಾಗಕ್ಕೆ ಅದನ್ನು ಅಳವಡಿಸಬೇಕು.

ಆದರೆ ಇಲಾಖೆ ಇದನ್ನು ಪಾಲಿಸುತ್ತಿಲ್ಲ. ಸುಟ್ಟುಹೋದ ಟಿ.ಸಿ ಯನ್ನು ರೈತರೇ ತಮ್ಮ ಸ್ವಂತ ಖರ್ಚಿನಲ್ಲಿ ದುರಸ್ಥಿ ಸ್ಥಳಕ್ಕೆ ಸಾಗಿಸಿ ಮತ್ತೆ ಅದನ್ನು ವಾಪಸ್ ತರಬೇಕಾಗಿದೆ. ಟಿ.ಸಿ ಅಳವಡಿಕೆಗೆ ಅಗತ್ಯವಾದ ಹಗ್ಗ ರಾಟೆಗಳನ್ನೂ ರೈತರೇ ತಂದುಕೊಡಬೇಕಾಗಿದೆ. ಇಲಾಖೆಯ ಎಂಜಿನಿಯರುಗಳ ಕರ್ತವ್ಯ ಲೋಪದಿಂದ ರೈತರಿಗೆ ಆಗುತ್ತಿರುವ ಬೆಳೆ ನಷ್ಟಕ್ಕೆ ಯಾರು ಹೊಣೆ? ಎಂದು ಆಕ್ರೋಶ ಹೊರಹಾಕಿರುವ ಪುಟ್ಟೇಗೌಡ ರೈತರಿಗೆ ಸಕಾಲದಲ್ಲಿ ಟಿ.ಸಿ ಅಳವಡಿಸಿದೆ ತೊಂದರೆ ನೀಡುತ್ತಿರುವ ಎಂಜಿನಿಯರುಗಳ ವಿರುದ್ದ ಕ್ರಮ ಜರುಗಿಸಬೇಕು. ಜಿಲ್ಲಾ ಉಸ್ತುವಾರಿ ಸಚಿವರು ಕ್ಷೇತ್ರಕ್ಕೆ ಆಗಮಿಸಿ ರೈತರ ಸಮಸ್ಯೆಗಳನ್ನು ಆಲಿಸಿ ರೈತ ವಿರೋಧಿ ನೌಕರರ ವಿರುದ್ದ ಶಿಸ್ತು ಕ್ರಮಕ್ಕೆ ಮುಂದಾಬೇಕು. ವಿದ್ಯುತ್ ಇಲಾಖೆಯ ಅಧಿಕಾರಿಗಳು ತಕ್ಷಣವೇ ರೈತ ಮಂಜುನಾಥ್ ಅವರಿಗೆ ಅಗತ್ಯವಾದ ಟಿ.ಸಿ ಅಳವಡಿಸಿಕೊಡಬೇಕು. ಇಲ್ಲವಾದಲ್ಲಿ ರಾಜ್ಯ ರೈತಸಂಘದ ವತಿಯಿಂದ ಸೆಸ್ಕಾಂ ಕಛೇರಿಗೆ ಮುತ್ತಿಗೆ ಹಾಕುವುದಾಗಿ ಎಚ್ಚರಿಸಿದ್ದಾರೆ.

# ಮಹಾತ್ಮರನ್ನು ಜಾತಿ ಸಂಕೋಲೆಯಿಂದ ಬಿಡುಗಡೆಗೊಳಿಸಿ



**ಮೈಸೂರು: ಏ.30:–** ಜಾತ್ಯಾತೀತ ರಾಷ್ಟ್ರವಾದ ಭಾರತದಲ್ಲಿ ದೇಶ ಕಟ್ಟಿದ ಮಹನೀಯರನ್ನು ಜಾತಿಗೆ ಸೀಮಿತಗೊಳಿಸಿರುವುದು ಖಂಡನೀಯ. ಮಹಾತ್ಮರನ್ನು ಜಾತಿ ಸಂಕೋಲೆಯಿಂದ ಬಿಡುಗಡೆ ಮಾಡುವ ಮೂಲಕ ಜ್ಯಾತ್ಯಾತೀತ ರಾಷ್ಟ್ರ ಎಂಬ ಸಂದೇಶ ಸಾರುವ ಅವಶ್ಯಕತೆ ಇದೆ ಎಂದು ಉರಿಲಿಂಗಿಪೆದ್ದಿ ಮಠದ ಜ್ಞಾನ ಪ್ರಕಾಶ ಸ್ವಾಮೀಜಿ ತಿಳಿಸಿದರು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ವತಿಯಿಂದ ಆಯೋಜಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಸವಣ್ಣನವರು ಇವ ನಮ್ಮವ ಇವ ನಮ್ಮವ ಎಂದ ಬಸವಣ್ಣನನ್ನು ಒಂದು ಜಾತಿಗೆ, ಕುಲವನ್ನು ಪ್ರಶ್ನೆ ಮಾಡಿದ ಕನಕದಾಸರನ್ನು ಮತ್ತೊಂದು ಜಾತಿಗೆ, ವಿಶ್ವಮಾನವ ಸಂದೇಶ ಕೊಟ್ಟ ಕುವೆಂಪು ಅವರನ್ನು ಜಾತಿಗೆ ಸೀಮಿತ ಮಾಡುವುದು ಚರಿತ್ರೆಗೆ ಮಾಡುವ ಅವಮಾನ ಮತ್ತು ಅದು ದ್ರೋಹದ ಕೆಲಸ. ಭಾರತದ ಪ್ರಥಮ ಪ್ರಜೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅಂಬೇಡ್ಕರ್ ನನಗೇ ದೇವರ ಸಮಾನ, ರಾಷ್ಟ್ರಪತಿಯಾಗಲು ಅಂಬೇಡ್ಕರ್ ಕಾರಣ ಎಂದಿದ್ದಾರೆ. ನೋಟು ಮತ್ತು ಓಟಿನ ಹಕ್ಕು ಕೊಟ್ಟ ಬಾಬಾ ಸಾಹೇಬರು ಪ್ರತಿ ಭಾರತೀಯನ ಹೃದಯದಲ್ಲಿರಬೇಕು. ಅಂಬೇಡ್ಕರ್ ಭಾರತದ ಅಂತಃಕರಣ ಮತ್ತು ಉಸಿರು ಎಂದು ಬಣ್ಣಿಸಿದರು.

ಭಾರತದ ಮಹಾರಾಜರು ಶಸ್ತ್ರಗಳನ್ನು ಬಳಸಿದರೂ ದೇಶದ ಚರಿತ್ರೆ ಬದಲಾಗಲಿಲ್ಲ. ಅಂಬೇಡ್ಕರ್ ಪೆನ್ನಿನ ಮೂಲಕ ಭಾರತದ ಚರಿತ್ರೆ ಬದಲಿಸಿದರು. ಶೋಷಿತರಿಗೆ ಶಿಕ್ಷಣ, ಎಲ್ಲ ಜಾತಿ, ಧರ್ಮದವರಿಗೆ ಸಮಾನ ಹಕ್ಕು ನೀಡಿದರು. ಭಾರತದ ಅಖಂಡತೆ ಎತ್ತಿ ಹಿಡಿದ ಮಹಾನ್ ಜ್ಞಾನಿ ಅಂಬೇಡ್ಕರ್ ಅವರಿಗೆ ಜಗತ್ತಿನ 198 ದೇಶಗಳು ಸೆಲ್ಯೂಟ್ ಹೊಡೆಯುತ್ತವೆ. ಈ ದೇಶದಲ್ಲಿ ಹೆಣ್ಣು ಮಕ್ಕಳು ಹೆರಿಗೆ ಯಂತ್ರವಾಗಿದ್ದರು. ಅಡುಗೆ ಮನೆಗೆ ಸೀಮಿತ ಮಾಡಲಾಗಿತ್ತು. ಅವರನ್ನು ಈ ದೇಶದ ರಾಷ್ಟ್ರಪತಿಯನ್ನಾಗಿ ಮಾಡಿದ್ದು ಅಂಬೇಡ್ಕರ್ ಸಂವಿಧಾನ. ಮಹಿಳೆಯರಿಗೆ ಸಮಾನ ವೇತನ, ಹೆರಿಗೆ ರಜೆಯನ್ನು ಕೊಟ್ಟ ಅಂಬೇಡ್ಕರ್ ಅವರನ್ನು ದೇಶದ ಎಲ್ಲ ಮಹಿಳೆಯರು ನೆನಯಬೇಕು ಎಂದರು.

ಮಾಜಿ ಮೇಯರ್ ಪುರುಷೋತ್ತಮ್ ಮಾತನಾಡಿ, ಒಂದು ವರ್ಗಕ್ಕೆ ಸೀಮಿತವಾಗಿದ್ದ ಶಿಕ್ಷಣವನ್ನು ಎಲ್ಲ ವರ್ಗಗಳಿಗೂ ಸಿಗುವಂತೆ ಮಾಡಿದ ಮಹಾನ್ ನಾಯಕ ಅಂಬೇಡ್ಕರ್. ಅಸಮಾನತೆ, ಶೋಷಣೆ, ದಬ್ಬಾಳಿಕೆ ಮತ್ತು ಅಸ್ಪೃಶ್ಯತೆಯ ಸಾಮಾಜಿಕ ವ್ಯವಸ್ಥೆಯನ್ನು ಮೆಟ್ಟಿನಿಂತ ನಾಯಕ ಅಂಬೇಡ್ಕರ್. ಅವರು ಸ್ವಾರ್ಥಕ್ಕಾಗಿ 32 ಡಿಗ್ರಿಗಳನ್ನು ಪಡೆಯಲಿಲ್ಲ. ದೇಶದ ಉದ್ಧಾರಕ್ಕಾಗಿ ಶೋಷಿತರ ವಿಮೋಚನೆಗಾಗಿ ವಿದೇಶದಲ್ಲಿ ಶಿಕ್ಷಣ ಪಡೆದರು. ಅವರನ್ನು ಜಾತಿಯಿಂದ ನೋಡುವುದು ಅಪಾಯಕಾರಿ. ಈಗಲೂ ಅಂಬೇಡ್ಕರ್ ಭಾವಚಿತ್ರಕ್ಕೆ ಅಪಚಾರ ಮಾಡಲಾಗುತ್ತಿರುವುದು ದುರಂತ ಎಂದರು.
ದೇವನಾಂದ ವರಪ್ರಸಾದ್ ಮತ್ತು ತಂಡದವರು ಭೀಮಗೀತೆ ಹಾಡಿದರು. ಸಮಾರಂಭದ ಬಳಿಕ ಹಿರಿಯ ರಂಗಕರ್ಮಿ ಜನಾರ್ಧನ(ಜನ್ನಿ) ಅವರ ತಂಡದವರು ಡಾ.ಬಿ.ಆರ್. ಅಂಬೇಡ್ಕರ್ ಗೀತಗಾಯನ ಮತ್ತು ನಾಟಕ ಪ್ರದರ್ಶಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ವಹಿಸಿದ್ದರು. ಕುಲಸಚಿವ ಪ್ರೊ.ನವೀನ್ ಕುಮಾರ್.ಎಸ್.ಕೆ, ಡಾ.ಬಿ.ಆರ್. ಅಂಬೇಡ್ಕರ್ ಅಧ್ಯಯನ ಮತ್ತು ಸಂಶೋಧನ ಕೇಂದ್ರದ ಅಧ್ಯಕ್ಷ ಡಾ.ಶಿವಕುಮಾರಸ್ವಾಮಿ, ರಾಮಚಂದ್ರನಾಯ್ಡು, ಡಾ.ಚಂದ್ರೇಗೌಡ, ನಿರಂಜನರಾಜ್, ಡಾ.ಆನಂದಕುಮಾರ್ ಮುಂತಾದವರಿದ್ದರು.

# ಕಾರ್ಮಿಕ ದಿನಾಚರಣೆಯಂದು ರಜೆ ಘೋಷಿಸಲು ಒತ್ತಾಯಿಸಿ ಕಾರ್ಮಿಕ ಅಧಿಕಾರಿಗೆ ದೂರು

**ಬೀದರ, ಏ 30:** ಬೀದರ ಜಿಲ್ಲೆಯ ವಿವಿಧ ಉದ್ಯೋಗ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸಾವಿರಾರು ಕಾರ್ಮಿಕರಿಗೆ ಕಾರ್ಮಿಕ ದಿನಾಚರಣೆಯಂದು ಕಡ್ಡಾಯ ರಜೆ ಘೋಷಿಸುವಂತೆ ಆಗ್ರಹಿಸಿ ಜಿಲ್ಲಾ ಕಾರ್ಮಿಕ ಅಧಿಕಾರಿಗೆ ಕರ್ನಾಟಕ ರಾಜ್ಯ ಕಾರ್ಮಿಕ ಪಡೆ ವತಿಯಿಂದ ದೂರು ಸಲ್ಲಿಸಲಾಗಿದೆ.
ಜಿಲ್ಲೆಯ ವಿವಿಧ ಕೈಗಾರಿಕೆಗಳು, ಸಂಸ್ಥೆಗಳು ಹಾಗೂ ಉದ್ಯೋಗ ಕ್ಷೇತ್ರಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ಸಾಮಾನ್ಯ ರಜೆಗಳಲ್ಲಿಯೂ ರಜೆ ನೀಡದೆ ದುಡಿಸಿಕೊಳ್ಳಲಾಗುತ್ತಿದೆ ಎಂಬ ಆರೋಪ ಕೇಳಿಬಂದಿದೆ. ಜೊತೆಗೆ ಸರ್ಕಾರ ನಿಗದಿಪಡಿಸಿದ ದಿನ ಕೂಲಿ ಪಾವತಿಸದೆ, ತಮ್ಮ ಇಚ್ಛೆಯಂತೆ ಕಡಿಮೆ ಕೂಲಿ ನೀಡುವ ಮೂಲಕ ಕಾರ್ಮಿಕರ ಮೇಲೆ ಅನ್ಯಾಯ ನಡೆಯುತ್ತಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.
ಪ್ರತಿ ವರ್ಷ ಮೇ 1ರಂದು ಕಾರ್ಮಿಕ ದಿನಾಚರಣೆ ಆಚರಿಸಲಾಗುತ್ತಿದ್ದರೂ, ಆ ದಿನವೇ ಕಾರ್ಮಿಕರಿಗೆ ರಜೆ ನೀಡದಿರುವುದು ವಿಷಾದನೀಯವಾಗಿದ್ದು, ಇದು ಕಾರ್ಮಿಕರ ಹಕ್ಕುಗಳ ಉಲ್ಲಂಘನೆಯಾಗಿದೆ ಎಂದು ಸಂಘದ ಮುಖಂಡರು ತಿಳಿಸಿದ್ದಾರೆ.
ಈ ಹಿನ್ನೆಲೆಯಲ್ಲಿ ಸಾಮಾನ್ಯ ರಜೆಗಳನ್ನು ಹೊರತುಪಡಿಸಿ, ಕಾರ್ಮಿಕ ದಿನಾಚರಣೆಯಂದು ಜಿಲ್ಲೆಯ ಎಲ್ಲಾ ವಿವಿಧ



ಉದ್ಯೋಗ ಸಂಸ್ಥೆಗಳಲ್ಲಿ ಕಾರ್ಮಿಕರಿಗೆ ಕಡ್ಡಾಯ ರಜೆ ನೀಡುವಂತೆ ಹಾಗೂ ನಿಯಮ ಉಲ್ಲಂಘಿಸುವ ಸಂಸ್ಥೆಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಏಪ್ರಿಲ್ 29, 2026ರಂದು ಜಿಲ್ಲಾ ಕಾರ್ಮಿಕ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.
ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಕಾರ್ಮಿಕ ಪಡೆ ಕಲ್ಯಾಣ ಕರ್ನಾಟಕ ವಿಭಾಗದ ಅಧ್ಯಕ್ಷ ಸೋಮನಾಥ ಎಂ. ಪಾಂಚಾಳ, ಸಂತೋಷ ಪಾಟೀಲ, ದಯಾನಂದ ಕಟ್ಟಿಮನಿ, ಶ್ರೀಮಂತ ರಾಮಗೊಂಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬಂಗಾಳದಲ್ಲಿ 92.47ರಷ್ಟು ದಾಖಲೆ ಮತದಾನ

**ಕೊಲ್ಕತ್ತಾ,ಏ.30–** ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯ ಎರಡನೇ ಮತ್ತು ಅಂತಿಮ ಹಂತದ ಮತದಾನದಲ್ಲಿ ದಾಖಲೆಯ 92.65% ಮತದಾನವಾಗಿದೆ .

ಅಶಾಂತಿ ಮತ್ತು ಹಿಂಸಾಚಾರದ ಪ್ರತ್ಯೇಕ ಘಟನೆಗಳ ನಡುವೆಯೂ ಇದು ದಾಖಲಾಗಿದೆ . ಇದರರ್ಥ ರಾಜ್ಯದಲ್ಲಿ ಎರಡು ಹಂತಗಳ ಮತದಾನದಲ್ಲಿ ಒಟ್ಟು ಮತದಾನವು ಸುಮಾರು 93% ರಷ್ಟಿದೆ, ಇದು ಸ್ವಾತಂತ್ರ್ಯದ ನಂತರ ಯಾವುದೇ ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ನಡೆದ ಅತ್ಯಧಿಕ ಮತದಾನವಾಗಿದೆ ಎಂದು ರಾಜ್ಯದ ಮುಖ್ಯ ಚುನಾವಣಾ ಅಧಿಕಾರಿ ತಿಳಿಸಿದ್ದಾರೆ. ಎರಡನೇ ಹಂತದಲ್ಲಿ, ದಕ್ಷಿಣ ಬಂಗಾಳದ ಏಳು ಜಿಲ್ಲೆಗಳಲ್ಲಿ ಹರಡಿರುವ 142 ವಿಧಾನಸಭಾ ಸ್ಥಾನಗಳಿಗೆ ಮತದಾನ ನಡೆದಿದೆ. ಗ್ರಾಮೀಣ ಪ್ರಾಬಲ್ಯವಿರುವ ಪುರ್ಬಾ ಬರ್ಧಮಾನ್ (93.39%), ಹೂಗ್ಲಿ (91.41%), ದಕ್ಷಿಣ 24 ಪರಗಣಗಳು (91.45%), ಉತ್ತರ 24 ಪರಗಣಗಳು (91.39%), ಮತ್ತು ನಾಡಿಯಾ (91.35%) ಜಿಲ್ಲೆಗಳಲ್ಲಿ ಅತಿ ಹೆಚ್ಚು ಮತದಾನ ದಾಖಲಾಗಿದೆ.

ಕೋಲ್ಕತ್ತಾ ದಕ್ಷಿಣ ಆಡಳಿತ ಜಿಲ್ಲೆಯಲ್ಲಿ ಅತಿ ಕಡಿಮೆ ಮತದಾನವಾಗಿದ್ದು, ಅಲ್ಲಿ ಶೇ. 87.25 ರಷ್ಟು ಮತದಾರರು ತಮ್ಮ ಮತ ಚಲಾಯಿಸಿದ್ದಾರೆ. ಪಕ್ಕದ ಕೋಲ್ಕತ್ತಾ ಉತ್ತರ ಆಡಳಿತ ಜಿಲ್ಲೆಯಲ್ಲಿ ಶೇ. 88.91 ರಷ್ಟು ಮತದಾನವಾಗಿದ್ದರೆ,




ಹೌರಾದಲ್ಲಿ ಶೇ. 90.93 ರಷ್ಟು ಮತದಾನವಾಗಿದೆ. ಚುನಾವಣಾ ಆಯೋಗವು ಪ್ರಕಟಣೆಯ ಸಮಯದಲ್ಲಿ ಅಂತಿಮ ಅಂಕಿಅಂಶಗಳನ್ನು ಇನ್ನೂ ಬಿಡುಗಡೆ ಮಾಡದ ಕಾರಣ ಮತದಾನದ ಪ್ರಮಾಣ ಹೆಚ್ಚಾಗುವ ನಿರೀಕ್ಷೆಯಿದೆ.

ಏಪ್ರಿಲ್ 23 ರಂದು ನಡೆದ ಮೊದಲ ಹಂತದ 152 ಸ್ಥಾನಗಳಲ್ಲಿ ಶೇ. 93.19 ರಷ್ಟು ಮತದಾರರು ತಮ್ಮ ಮತ ಚಲಾಯಿಸಿದ ದಾಖಲೆಯ ಮತದಾನಕ್ಕೆ ಇದು ಹೊಂದಿಕೆಯಾಗಿದೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು, "ಸ್ವಾತಂತ್ರ್ಯದ ನಂತರ ಪಶ್ಚಿಮ ಬಂಗಾಳದಲ್ಲಿ ಮೊದಲ ಮತ್ತು ಎರಡನೇ ಹಂತಗಳಲ್ಲಿ ಇದುವರೆಗಿನ ಅತ್ಯಧಿಕ ಶೇಕಡಾವಾರು ಮತದಾನ ಎನ್ನುವ ಮಾಹಿತಿ ನೀಡಿದ್ದಾರೆ. ಇದು ಭಾರತದ ಚುನಾವಣಾ ಇತಿಹಾಸದಲ್ಲಿ ಯಾವುದೇ ರಾಜ್ಯದಲ್ಲಿ ಅತಿ ಹೆಚ್ಚು 'ಮತದಾರರ ಮತದಾನ'ವಾಗಿದೆ. 2021 ರ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ 82% ಮತದಾನವಾಗಿತ್ತು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE